ಸಂಪುಟ : 9 ಸಂಚಿಕೆ 15 ಪುಟ : 4 ಬೆಲೆ : 3.00 ರವಿವಾರ ಫೆಬ್ರವರಿ 11, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 15 Pages : 4 Price : 3.00 Sunday February 11, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಂವಿಧಾನ ಪೂರ್ವ ಪೀಠಿಕೆ ಕಂಠಪಾಠ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ವತಿಯಿಂದ ಗದಗ ಜಿಲ್ಲೆಯ ವಿದ್ಯಾರ್ಥಿಗಳಿಗೆ 206ನೇ ಭೀಮಾ ಕೋರೆಂಗಾವ್ ವಿಜಯೋತ್ಸವ ಹಾಗೂ ಮೊಟ್ಟ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನ ಮತ್ತು ಗಣರಾಜ್ಯೋತ್ಸವದ ಪ್ರಯುಕ್ತ ಸಂವಿಧಾನ ಪೂರ್ವ ಪಿಠಿಕೆ ಕಂಠಪಾಠ ಸ್ಪರ್ಧೆಯನ್ನು ಜ. 28ರಂದು ಏರ್ಪಡಿಸಲಾಗುವುದೆಂದು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಲಾಗಿತ್ತು.

ಕಾರಣಾಂತರಗಳಿಂದ ಈ ಕಾರ್ಯಕ್ರಮವನ್ನು ಫೆ. 11ರ ಮಧ್ಯಾಹ್ನ 2 ಗಂಟೆಗೆ ಗದಗ ನಗರದ ಹೊಂಬಳ ನಾಕಾ, ಡಾ. ಬಿ.ಆರ್. ಅಂಬೇಡ್ಕರ್ ನಗರದ ಶಾಲೆ ನಂ. 17ರಲ್ಲಿ ಆಡಿಷನ್ ಜರುಗುವುದು. ಆಡಿಷನ್‌ನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಸಂಜೆ 6 ಗಂಟೆಗೆ ವೇದಿಕೆಯ ಮೇಲೆ ಸ್ಪರ್ಧೆ ಜರುಗಲಿದೆ. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ನೀಡಲಾಗುವುದು ಮತ್ತು ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ಹಾಗೂ ನೋಟ್‌ಬುಕ್, ಪೆನ್ನು ಮತ್ತು ಮಕ್ಕಳಿಗಾಗಿ ಸಂವಿಧಾನ ಪುಸ್ತಕ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ 8073909262, 9964228964 ಸಂಪರ್ಕಿಸಬಹುದು ಎಂದು ಅಧ್ಯಕ್ಷ ಶಿವಾನಂದ ತಮ್ಮಣ್ಣವರ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಬೇಡಿಕೆಗಳ ಈಡೇರಿಕೆಗಾಗಿ ಹೋರಾಟ




■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನಲ್ಲಿ ಫೆ.15ರಂದು ಅಖಿಲ ಕರ್ನಾಟಕ ಸಮುದಾಯ ಆರೋಗ್ಯ ನೌಕರರ ಸಂಘದ ವತಿಯಿಂದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಸಮುದಾಯ ಆರೋಗ್ಯ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಹೇಶ ಭಜಂತ್ರಿ ಹೇಳಿದರು.

ನಗರದ ಪ್ರತಿಕಾಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆ.15ರಂದು ನಡೆಯುವ ಮುಷ್ಕರದಲ್ಲಿ ರಾಜ್ಯ ಎಲ್ಲಾ ಜಿಲ್ಲೆಗಳಿಂದ 6192 ಸಿಬ್ಬಂದಿಗಳು ಪಾಲ್ಗೊಳ್ಳುತ್ತಿದ್ದು, ಜಿಲ್ಲೆಯಿಂದ 116 ಜನರು ಪಾಲ್ಗೊಳ್ಳಲಿದ್ದೇವೆ. ಸಿಪಿಎಚ್ಸಿ-ಯುಎಚ್ಸಿ ಮಾರ್ಗಸೂಚಿಗಳ ಅನ್ವಯ 6 ವರ್ಷ ಸೇವೆ ಪೂರೈಸಿದ ಎಲ್ಲಾ ಸಮುದಾಯ ಆರೋಗ್ಯ ಅಧಿಕಾರಿಗಳ ಸೇವೆಯನ್ನು ಖಾಯಂಗೊಳಿಸಬೇಕು. ತಡೆ ಹಿಡಿದಿರುವ ಶೇ 5 ವಾರ್ಷಿಕ ವೆಚ್ಚ ಮತ್ತು ಶೇ 10 ಲಾಯಾಲಿಟಿ ಬೋನಸ್ ನೀಡುವುದು ಸೇರಿದಂತೆ 11 ಪ್ರಮುಖ ಬೇಡಿಕೆಗಳ ಈಡೇರಿಕೆಗಾಗಿ ಹೋರಾಟ ನಡೆಸಲಾಗುತ್ತಿದೆ ಎಂದರು.

ಸಮುದಾಯ ಆರೋಗ್ಯ ಅಧಿಕಾರಿಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಒಳಗುತ್ತಿಗೆ ಆಧಾರದ ಮೇಲೆ ಗ್ರಾಮೀಣ ಭಾಗದಲ್ಲಿರುವ ಕ್ಷೇಮ ಕೇಂದ್ರದಲ್ಲಿ ಕಳೆದ 7 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದರೂ ಯಾವುದೇ ಅಗತ್ಯ ಸೌಲಭ್ಯಗಳು ಸಿಗುತ್ತಿಲ್ಲ.

ನಮ್ಮ ಸಂಘಟನೆಯ ವತಿಯಿಂದ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ರಾಷ್ಟ್ರೀಯ ಆರೋಗ್ಯ ಅಭಿಮಾನದ ನಿರ್ದೇಶಕರು, ಆರೋಗ್ಯ ಸಚಿವರಿಗೆ ಹಲವಾರು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗದ ಹಿನ್ನೆಲೆಯಲ್ಲಿ, ಈಗ ಅನಿವಾರ್ಯವಾಗಿ ಅನಿರ್ದಿಷ್ಟಾವಧಿ ಮುಷ್ಕರವನ್ನು ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಡಿಯಪ್ಪ ಮಾದರ, ಖಜಾಂಚಿ ಪಿ.ಹರೀಶ, ತಾಯಪ್ಪ ತಳಗೇರಿ ಇದ್ದರು.

### ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಫಲ-ಪುಷ್ಪ ಪ್ರದರ್ಶನ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಫಲ-ಪುಷ್ಪ ಲೋಕ ಅನಾವರಣ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಜನಸಾಮಾನ್ಯರ ಆಸಕ್ತಿ ಹಾಗೂ ಅಭಿರುಚಿಗೆ ಅನುಗುಣವಾಗಿ ಫಲ-ಪುಷ್ಪ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಈ ಫಲ-ಪುಷ್ಪ ಪ್ರದರ್ಶನ ನಗರದ ಆರೋಗ್ಯವನ್ನು ಎತ್ತಿ ತೋರಿಸುವಂತಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ. ಪಾಟೀಲ ಹೇಳಿದರು.

ನಗರದ ಎಪಿಎಂಸಿ ಆವರಣದಲ್ಲಿರುವ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ತೋಟಗಾರಿಕೆ ಇಲಾಖೆ ವತಿಯಿಂದ ಶನಿವಾರದಿಂದ ಮೂರು ದಿನಗಳ ಕಾಲ ಹಮ್ಮಿಕೊಂಡಿರುವ ಫಲ-ಪುಷ್ಪ ಪ್ರದರ್ಶನವನ್ನು ಉದ್ಘಾಟಿಸಿ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಅವರು ಮಾತನಾಡಿದರು.





ಫಲ-ಪುಷ್ಪ ಪ್ರದರ್ಶನ ಎನ್ನುವದಕ್ಕಿಂತ ಕಲಾ ಪುಷ್ಪ ಪ್ರದರ್ಶನ ಎನ್ನುವದು ಉತ್ತಮ ಎನ್ನುವಂತಿದೆ. ಇದೊಂದು ಶ್ರೇಷ್ಠ ಪ್ರದರ್ಶನ. ಸಾರ್ವಜನಿಕರಿಗೆ ವೀಕ್ಷಣೆಗೆ ಉಚಿತ ಅವಕಾಶವನ್ನು ಇಲಾಖೆಯಿಂದ ಮಾಡಲಾಗಿದ್ದು, ಜನಸಾಮಾನ್ಯರು ಈ ಫಲಪುಷ್ಪ ಪ್ರದರ್ಶನಕ್ಕೆ ಆಗಮಿಸಿ ಆಸ್ವಾದಿಸಬೇಕು. ತೋಟಗಾರಿಕಾ ಇಲಾಖೆಯು ವ್ಯವಸ್ಥಿತ ಹಾಗೂ ಉತ್ತಮವಾಗಿ ಫಲ-ಪುಷ್ಪ ಪ್ರದರ್ಶನವನ್ನು ಏರ್ಪಡಿಸಿದೆ ಎಂದರಲ್ಲದೆ, ಅತ್ಯುತ್ತಮವಾಗಿ ಪ್ರದರ್ಶನವನ್ನು ಆಯೋಜಿಸಿದ ಇಲಾಖಾಧಿಕಾರಿಗಳಿಗೆ ಇದೇ ಸಂದರ್ಭದಲ್ಲಿ ಸಚಿವರು ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕರುಗಳಾದ ಶೈಲೇಂದ್ರ ಬಿರಾದಾರ, ಗೀರಿಶ ಹೊಸೂರ, ಗಣ್ಯರಾದ ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ ಸೇರಿದಂತೆ ಇತರರು ಇದ್ದರು.

▸▸3ನೇ ಪುಟಕ್ಕೆ

### ಪ್ರದರ್ಶನದ ಆಕರ್ಷಣೆಗಳು

ಗುಲಾಬಿ ಹೂವುಗಳಿಂದ ಅಲಂಕೃತಗೊಂಡ ವೀರನಾರಾಯಣ ದೇವಸ್ಥಾನ, ಸಿರಿಧಾನ್ಯಗಳಲ್ಲಿ ಅರಳಿದ ಕನ್ನಡಾಂಬೆ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ, ಮರಳಿನಲ್ಲಿ ಸಾಂಸ್ಕೃತಿಕ ರಾಯಭಾರಿ ಬಸವಣ್ಣನ ಮೂರ್ತಿ, ಏಲಕ್ಕಿಯಲ್ಲಿ ಗಣೇಶನ ಮೂರ್ತಿ, ಹೂವುಗಳಲ್ಲಿ ಅಲಂಕೃತಗೊಂಡಿರುವ ಸೆಲ್ಫಿ ಪಾಯಿಂಟ್‌ಗಳು, ತಬಲಾ, ಪಿಯಾನೋ, ಕಲ್ಲಂಗಡಿ ಹಣ್ಣಿನಲ್ಲಿ ಕೆತ್ತನೆಗೊಂಡ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಭಾವಚಿತ್ರಗಳು ನೋಡುಗರ ಗಮನ ಸೆಳೆದವು.

### ಕಲ್ಲಂಗಡಿಯಲ್ಲಿ ಮೂಡಿದ ಸಹಕಾರಿ ಧುರೀಣ

ಫಲ-ಪುಷ್ಪ ಪ್ರದರ್ಶನದಲ್ಲಿ ವಿವಿಧ ಹಣ್ಣುಗಳಿಂದ ಮಹನೀಯರ ಕಲಾಕೃತಿಗಳನ್ನು ರಚಿಸಲಾಗಿದೆ. ಅದರಲ್ಲಿ ಪ್ರಮುಖವಾಗಿ ಸಹಕಾರಿ ಧುರೀಣ, ರಾಜಕೀಯ ಮುತ್ಸದ್ಧಿ ದಿ ಕೆ.ಎಚ್. ಪಾಟೀಲ ಅವರ ಕಲಾಕೃತಿಯನ್ನು ಕಲ್ಲಂಗಡಿ ಹಣ್ಣಿನಲ್ಲಿ ರಚಿಸಿದ್ದು, ಜನಸಾಮಾನ್ಯರ ಆಕರ್ಷಣೆಗೆ ಭಾಜನವಾಯಿತು. ಇದರೊಟ್ಟಿಗೆ ಕರ್ನಾಟಕ ನಕ್ಷೆ, ಪುನೀತ್ ರಾಜಕುಮಾರ, ಪಂ. ಜವಹಾರಲಾಲ ನೆಹರು, ಸಿದ್ಧನಗೌಡ ಪಾಟೀಲ, ಅಂದಾನೆಪ್ಪ ದೊಡ್ಡಮೇಟಿ, ಹುಯಿಲಗೋಳ ನಾರಾಯಣರಾಯರು, ರವೀಂದ್ರನಾಥ ಟ್ಯಾಗೋರ ಅವರ ಕಲಾತ್ಮಕ ಚಿತ್ತಾರ ಆಕರ್ಷಣೀಯ ಎನಿಸಿದವು.

### ಈಶ್ವರಪ್ಪ ಹೇಳಿಕೆಗೆ ಸಚಿವ ಎಚ್.ಕೆ. ಪಾಟೀಲ ಕಿಡಿ

# ಪ್ರಜಾಪ್ರಭುತ್ವದಲ್ಲಿ ಹೊಡಿ-ಬಡಿ ಸಲ್ಲದು

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಇರುವವರು ಹೊಡಿ, ಬಡಿ, ಕಡಿ ಎನ್ನುವುದು ಸರಿಯಲ್ಲ. ಅದರಲ್ಲೂ ಕೆ.ಎಸ್. ಈಶ್ವರಪ್ಪ ಅವರಂಥ ಹಿರಿಯ ನಾಯಕರಿಂದ ಈ ರೀತಿಯ ಮಾತುಗಳನ್ನು ನಿರೀಕ್ಷಿಸಿರಲಿಲ್ಲ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಶನಿವಾರ ಫಲ-ಪುಷ್ಪ ಪ್ರದರ್ಶನಕ್ಕೆ ಚಾಲನೆ ನೀಡಿದ ನಂತರ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಸ್ನೇಹ ಭಾವದಿಂದ ಈ ರೀತಿಯ ಪದಬಳಕೆ ಮಾಡುವುದು ಸರಿಯಲ್ಲ ಎಂದು ಕೆ.ಎಸ್. ಈಶ್ವರಪ್ಪ ಅವರಿಗೆ ಹೇಳಿದ್ದೆ. ಆದರೂ ಅವರು ತಮ್ಮ ವರಸೆ ಬದಲಿಸಿಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಕಾನೂನಾತ್ಮಕವಾಗಿ ಏನಾಗಬೇಕೋ ಅದು ಆಗಿಯೇ ಆಗುತ್ತದೆ ಎಂದು ಹೇಳಿದರು.

ಪಿ.ವಿ. ನರಸಿಂಹರಾವ್ ಅವರಿಗೆ ಕೇಂದ್ರ ಸರಕಾರ ಭಾರತ ರತ್ನ ನೀಡಿರುವುದು ಸ್ವಾಗತಾರ್ಹ. ಇವತ್ತು ಜಗತ್ತಿನ ಮೂರು ಅತ್ಯುತ್ತಮ ಆರ್ಥಿಕ ಸ್ಥಿತಿ ಹೊಂದಿರುವ ದೇಶವಾಗಿ ಭಾರತ ಗ0ನರಸಿಂಹರಾವ್ ಅವರೇ ಕಾರಣ. ದೇಶದ ಆರ್ಥಿಕತೆಗೆ ಉತ್ತೇಜನ ನೀಡಲು ಮನಮೋಹನ ಸಿಂಗ್ ಅವರಂಥ ಆರ್ಥಿಕ ತಜ್ಞರನ್ನು ಗುರುತಿಸಿದ್ದು ನರಸಿಂಹರಾವ್. ಅವರಿಗೆ ಭಾರತ ರತ್ನ ಸಂದಿರುವುದು ಖುಷಿ ತಂದಿದೆ ಎಂದರು.



ರಾಜ್ಯ ಬಜೆಟ್‌ನಲ್ಲಿ ಗದಗ ಜಿಲ್ಲೆಯ ಬೇಡಿಕೆ ಸಾಕಷ್ಟಿದೆ. ಆದರಲ್ಲಿ ಡಂಬಳದಲ್ಲಿ ತೋಟಗಾರಿಕೆ ಕಾಲೇಜು ಘೋಷಣೆ ನಿರೀಕ್ಷೆ ಮಾಡಲಾಗಿದೆ. ಅದೇ ರೀತಿ ಸರಕಾರಿ ಇಂಜಿನಿಯರಿಂಗ್ ಕಾಲೇಜನ್ನು ಕೇಳಿದ್ದೇವೆ. ಆದರೆ ಅವು ಎಷ್ಟರ ಮಟ್ಟಿಗೆ ಈಡೇರುತ್ತವೆ ಎನ್ನುವುದು ಬಜೆಟ್ ನಂತರ ಸ್ಪಷ್ಟವಾಗಲಿದೆ ಎಂದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗ್ಯಾರಂಟಿ ಕಾರ್ಯಕ್ರಮದ ಮಧ್ಯೆಯೂ ಜನಪರ ಕಾರ್ಯಕ್ರಮಗಳನ್ನು ನೀಡುವ ಒತ್ತಡದಲ್ಲಿದ್ದಾರೆ ಎಂದರು.

ಮುಂಡರಗಿಯಲ್ಲಿ ನಡೆದ ಜನತಾ ದರ್ಶನದಲ್ಲಿ ಒಟ್ಟು 331 ಅರ್ಜಿಗಳನ್ನು ಸ್ವೀಕರಿಸಲಾಗಿತ್ತು. ಅದರಲ್ಲಿ 12 ಅರ್ಜಿಗಳನ್ನು ಹೊರತುಪಡಿಸಿ ಇನ್ನುಳಿದ ಎಲ್ಲ ಅರ್ಜಿಗಳನ್ನು ವಿಲೇವಾರಿ ಮಾಡಿ, ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗಿ ಪರಿಹಾರ ನೀಡಲಾಗಿದೆ. ಅದೇ ರೀತಿ ವಿಲೇವಾರಿ ಆಗದ ಕಡತಗಳ ವಿಲೇವಾರಿಯೂ ಆರಂಭವಾಗಿದೆ. ಈ ನಿಟ್ಟಿನಲ್ಲಿ ಹೆಚ್ಚು ಪರಿಣಾಮಕಾರಿಯಾದ ಕ್ರಮಗಳನ್ನು ಮುಂದಿನ ದಿಗಳಲ್ಲಿ ಕೈಗೊಳ್ಳಲಾಗುವುದು ಎಂದು ಸಚಿವ ಪಾಟೀಲ ಹೇಳಿದರು.

### ಗದಗ ಜಿಲ್ಲಾ ಯುವ ಕಾಂಗ್ರೆಸ್‌ನಿಂದ ದಿ ಕೆ.ಎಚ್. ಪಾಟೀಲರ ಪುಣ್ಯತಿಥಿ ಆಚರಣೆ

## ಕೆ.ಎಚ್. ಪಾಟೀಲರು ಮಾದರಿ ರಾಜಕಾರಣಿ



■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರಿ ರಂಗದ ಭೀಷ್ಮ ಕೆ.ಎಚ್. ಪಾಟೀಲರ ಪುಣ್ಯತಿಥಿಯನ್ನು ಗದಗ ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ಶುಕ್ರವಾರ ನಗರದ ದಿ ಕೆ.ಎಚ್. ಪಾಟೀಲ ವೃತ್ತದ ಬಳಿ ಆಚರಿಸಲಾಯಿತು.

ಕೆ.ಎಚ್. ಪಾಟೀಲರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಕೆ.ಎಚ್. ಪಾಟೀಲರು ರೈತರ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದರು. ಹಲವು ಖಾತೆಗಳನ್ನು ನಿಭಾಯಿಸಿದ್ದ ಅವರು, ನೇರ ಹಾಗೂ ನಿಷ್ಠುರತೆಯಿಂದ ಗುರುತಿಸಿಕೊಂಡಿದ್ದರು. ಪ್ರತಿಯೊಬ್ಬರೂ ಕೆ.ಎಚ್. ಪಾಟೀಲರ ಆದರ್ಶವನ್ನು ಅಳವಡಿಸಿಕೊಂಡು ಮುನ್ನಡೆದರೆ ಯಶಸ್ವಿ ಹಾಗೂ ಮಾದರಿ ರಾಜಕಾರಣಿಯಾಗಲು ಸಾಧ್ಯ ಎಂದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ, ಪ್ರಭು ಬುರಬುರೆ, ರೋಣ ಪುರಸಭೆ ಉಪಾಧ್ಯಕ್ಷ ಮಿಥುನ ಜಿ.ಪಾಟೀಲ, ಗದಗ-ಬೆಟಗೇರಿ ನಗರಸಭೆ ಸದಸ್ಯೆ ಶಕುಂತಲಾ ಅಕ್ಕಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಎಚ್.ಪಾಟೀಲ, ಗದಗ ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿ ಅಧ್ಯಕ್ಷೆ ನೀಲಮ್ಮ ಬೋಳನವರ, ಗದಗ ಜಿಲ್ಲಾ ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ಬಸವರಾಜ ಕಡೇಮನಿ, ಉಮರಫಾರೂಕ್ ಹುಬ್ಬಳ್ಳಿ, ಗದಗ ಜಿಲ್ಲಾ ರಾಜೀವಗಾಂಧಿ ಪಂಚಾಯತ್ ರಾಜ್ ಸಂಘಟನೆ ಜಿಲ್ಲಾಧ್ಯಕ್ಷ ಚನ್ನಪ್ಪ ಜಗಲಿ, ಗದಗ ಜಿಲ್ಲಾ ಸಾಮಾಜಿಕ ಜಾಲತಾಣ ಅಧ್ಯಕ್ಷ ರಮೇಶ ಹೊನ್ನಿನಾಯ್ಕರ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ, ಮುಖಂಡರಾದ ಸೈಯ್ಯದಖಾಲಿದ್ ಕೊಪ್ಪಳ, ಅನ್ವರ ನದಾಫ, ಶರಣಪ್ಪ ಬೋಳನವರ, ಕಿರಣ ಗಾಮನಗಟ್ಟಿ, ಅಜ್ಜಪ್ಪ ಹುಗ್ಗೆಣ್ಣವರ, ಉಮರಫಾರೂಕ್ ಬಾರಿಗಿಡದ, ದಾದಾಪೀರ ಮುಂಡರಗಿ, ಸುರೇಶ ಹೊಸಮನಿ, ಮುಕ್ತುಂ ಓಲೇಕಾರ, ರಾಜು ದಾವಣಗೆರೆ, ವಹೀದಾ ಖಲೀಫ, ಸಾವಿತ್ರಿ ಹೂಗಾರ, ಮುಸ್ಕಾನ ಸೈಯ್ಯದ, ರೇಣುಕಾ ಕುರಿ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಂವಿಧಾನ ಜಾಗೃತಿ: ಸಿರಿಧಾನ್ಯದಲ್ಲಿ ಅರಳಿದ ಸಂವಿಧಾನ ಶಿಲ್ಪಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಪಿಎಂಸಿ ಆವರಣದಲ್ಲಿರುವ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತೋಟಗಾರಿಕೆ ಇಲಾಖೆ ವತಿಯಿಂದ ಮೂರು ದಿನಗಳ ಕಾಲ ಹಮ್ಮಿಕೊಂಡಿರುವ ಫಲ-ಪುಷ್ಪ ಪ್ರದರ್ಶನದಲ್ಲಿ ಸಂವಿಧಾನ ಜಾಗೃತಿಗಾಗಿ ಸಿರಿಧಾನ್ಯದಲ್ಲಿ ಅರಳಿದ ಸಂಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ ಅವರ ಚಿತ್ರ ಅತ್ಯಾಕರ್ಷಣೆಯ ಕೇಂದ್ರ ಬಿಂದುವಾಗಿದೆ.






ಸಂವಿಧಾನ ಪೀಠಿಕೆಯನ್ನು ಜನಸಾಮಾನ್ಯರಿಗೆ ಅರ್ಥೈಸಬೇಕು. ಈ ಮೂಲಕ ಜನ ಸಾಮಾನ್ಯರು ಸಹ ಸಂವಿಧಾನವನ್ನು ಅರಿತು ತಮ್ಮ ಹಕ್ಕು ಕರ್ತವ್ಯಗಳನ್ನು ಪಾಲಿಸಬೇಕು. ಸಂವಿಧಾನ ದತ್ತವಾಗಿ ಇರುವ ಹಕ್ಕುಗಳ ಮೂಲಕ ಸಮ ಸಮಾಜ ನಿರ್ಮಾಣಕ್ಕೆ ಜನ ಸಾಮಾನ್ಯರೆಲ್ಲರೂ ಒಂದು ಎಂಬ ಭ್ರಾತೃತ್ವ ಭಾವನೆ ಮೂಡಿಸುವ ಆಶಯವನ್ನು ಸಂವಿಧಾನ ಜಾಗೃತಿ ಕಾರ್ಯಕ್ರಮ ಒಳಗೊಂಡಿದೆ.

ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥಾ ನಿರಂತರವಾಗಿ ಒಂದು ತಿಂಗಳ ಕಾಲ ನಡೆಯುತ್ತಲಿದೆ. ಇದೇ ಜ. 26ರಂದು ಗಣರಾಜ್ಯೋತ್ಸವ ದಿನಾಚರಣೆ ಸಂದರ್ಭದಲ್ಲಿ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಚಾಲನೆ ನೀಡಿದ್ದರು. ಜ.26 ರಿಂದ ಜಿಲ್ಲೆಯ ಪ್ರತಿ ಗ್ರಾಮ ಪಂಚಾಯತ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಸಂವಿಧಾನದ ಆಶಯಗಳ ಕುರಿತು ಜನ ಸಾಮಾನ್ಯರಿಗೆ ಜಾಗೃತಿ ಮೂಡಿಸುವ ಕಾರ್ಯ ಪ ರಿ ಣಾ ಮ ಕಾ ರಿ ಯಾ ಗಿ ನಡೆಯುತ್ತಿದೆ.

ಫಲ-ಪುಷ್ಪ ಪ್ರದರ್ಶನದ 'ಲ್ಲಿಯೂ ಸಹ ಜನ ಸಾಮಾನ್ಯರಿಗೆ ಸಂವಿಧಾನದ ಆಶಯಗಳನ್ನು ತಿಳಿಸಿಕೊಡುವ ಸುದುದ್ದೇಶದಿಂದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಯನ್ನು ಸಿರಿಧಾನ್ಯಗಳಲ್ಲಿ ಮೂಡಿಸುವ ಮೂಲಕ ಸಂವಿಧಾನದ ಆಶಯಗಳನ್ನು ಜನ ಸಾಮಾನ್ಯರಿಗೆ ಮೂಡಿಸುವಲ್ಲಿ ತೋಟಗಾರಿಕೆ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಯಶಸ್ವಿಯಾದವು.

## ಸಂಪಾದಕೀಯ

# ಕಪ್ಪು–ಬಿಳಿ ಪತ್ರ ಸಮರ: ವೈರುಧ್ಯ ಚರ್ಚೆಗೆ ವೇದಿಕೆ

ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ 10 ವರ್ಷ ಕಳೆಯುತ್ತಿರುವ ಸಂದರ್ಭದಲ್ಲಿ ಕಾಂಗ್ರೆಸ್ ಇದನ್ನು ಅನ್ಯಾಯ ಕಾಲ ಎಂದು ಬಿಂಬಿಸಿ, ಬಿಜೆಪಿ ವಿರುದ್ಧ ಟೀಕಾ ಪ್ರಹಾರ ನಡೆಸಿದೆ. ಮತ್ತೊಂದೆಡೆ ಬಿಜೆಪಿಯೂ ಮೊಟ್ಟ ಮೊದಲ ಬಾರಿಗೆ ಯುಪಿಎ ಸರಕಾರದ ಅವಧಿಯ ಕುರಿತು ಶ್ವೇತಪತ್ರ ಹೊರಡಿಸಿ, ಹಿಡಿತ ತಪ್ಪಿದ ವೆಚ್ಚ, ದುರ್ಬಲ ನಾಯಕತ್ವ ಎಂದು ಟೀಕಿಸಿದೆ.

ಬಿಜೆಪಿ ಶ್ವೇತ ಪತ್ರ ಹೊರಡಿಸಿದರೆ, ಕಾಂಗ್ರೆಸ್ 54 ಪುಟಗಳ ಪತ್ರಿಕೆಯೊಂದನ್ನು ಹೊರತಂದು ತಮ್ಮದೇಯಾದ ರೀತಿಯಲ್ಲಿ ಟೀಕೆ ಟಿಪ್ಪಣಿಗಳನ್ನು ಮಾಡುತ್ತಿದ್ದಾರೆ. ರಾಜಕೀಯ ಲಾಭಕ್ಕಾಗಿ ಈ ಎರಡೂ ಪಕ್ಷಗಳು ಕಪ್ಪು ಬಿಳುಪು ಪತ್ರ ಸಮರ ಆರಂಭಿಸಿರುವುದು, ಲೋಕಸಭೆ ಚುನಾವಣೆಗಾಗಿ ಎನ್ನುವುದು ಸಾಮಾನ್ಯ ಜನರಿಗೂ ಗೊತ್ತಿರುವ ವಿಚಾರ.

ಕಾಂಗ್ರೆಸ್ ಮತ್ತು ಬಿಜೆಪಿಯ ಈ ಕಪ್ಪು ಬಿಳುಪು ಎನ್ನುವುದು ವೈರುಧ್ಯಗಳ ಚರ್ಚೆಯಾಗುತ್ತಿದೆ. ಬಿಜೆಪಿ ನಾಯಕರು ಕಾಂಗ್ರೆಸ್ಸಿಗರ ಟೀಕೆಗೆ ಉತ್ತರಿಸುತ್ತಿಲ್ಲ. ಇತ್ತ ಕಾಂಗ್ರೆಸ್ಸಿಗರು ಬಿಜೆಪಿ ನಾಯಕರ ಪ್ರಶ್ನೆಗೆ ಉತ್ತರಿಸುತ್ತಿಲ್ಲ. ಒಟ್ಟಾರೆ ತಮ್ಮ ವಿವೇಚನೆಗೆ ಮತ್ತು ವರಿಷ್ಠರ ಸೂಚನೆಯಂತೆ ತಾವು ಸಿದ್ಧಪಡಿಸಿದ ವರದಿಯನ್ನು ಮುಂದಿಟ್ಟುಕೊಂಡು, ಅದನ್ನು ಜನರ ಮುಂದೆ ಹೇಳಿಕೊಳ್ಳುತ್ತಾ ಸಾಗಿದ್ದಾರೆ.

ಕಾಂಗ್ರೆಸ್ ಮಾಡಿರುವ ಅನ್ಯಾಯ ಕಾಲದ ಆರೋಪಗಳಿಗೆ ಬಿಜೆಪಿ ಈ ವರೆಗೆ ಉತ್ತರನ್ನೂ ನೀಡಿಲ್ಲ. ನಿರುದ್ಯೋಗ ಸಮಸ್ಯೆ, ನೋಟ್ ಬ್ಯಾನ್, ಬೆಲೆ ಏರಿಕೆ ಕುರಿತಾಗಿ ಮಾಡಿದ ಆರೋಪಗಳಿಗೆ ತಿರುಗೇಟು ನೀಡಬೇಕಾಗಿದ್ದ ಬಿಜೆಪಿ ನಾಯಕರು, ಯುಪಿಎ ಕಾಲದ ನೀತಿಗಳನ್ನು ಪಟ್ಟಿ ಮಾಡಿ ತಿರುಗೇಟು ನೀಡುತ್ತಿದೆ. ಇನ್ನು ಕಾಂಗ್ರೆಸ್ ಸಹ ಅಷ್ಟೆ, ಯುಪಿಎ ಅವಧಿಯಲ್ಲಾದ ತಪ್ಪು ನೀತಿಗಳ ಬಗ್ಗೆ ಕಾಂಗ್ರೆಸ್ ಸ್ಪಷ್ಟೀಕರಣ ನೀಡದೆ, ಅನ್ಯಾಯ ಕಾಲದ ಪಟ್ಟಿಯನ್ನು ಪುಂಖಾನುಪುಂಖವಾಗಿ ಹೇಳುತ್ತಿದೆ.

ಕಾಂಗ್ರೆಸ್ ಬಿಜೆಪಿ ನಾಯಕರ ಈ ಹೇಳಿಕೆಗಳು, ಕಪ್ಪು ಬಿಳುಪು ಪತ್ರ ಸಮರ ನೋಡಿದರೆ ಒಂದು ರೀತಿಯಲ್ಲಿ ಹೈಸ್ಕೂಲ್ ಮಕ್ಕಳ ಜಗಳದ ರೀತಿ ಕಾಣುತ್ತಿದೆ. ಪ್ರಜಾಪ್ರಭುತ್ವ ವ್ಯವಸ್ಥೆ ಎನ್ನುವುದು ಮಕ್ಕಳ ಆಟದಂತಾಗಿದೆ. ಇವರು ಕಪ್ಪು ಪತ್ರಿಕೆ ಹೊರಡಿಸಿದರೆ, ಅವರು ಬಿಳಿ ಪತ್ರ ಹೊರಡಿಸುತ್ತಿದ್ದಾರೆ. ಅವರು ಮಾಡಿದರು ಎಂದು ಇವರು ಅದೇ ರೀತಿ ಮಾಡುವುದು ಮಕ್ಕಳಾಟ ಅಲ್ಲದೇ ಮತ್ತೇನು? ಸದ್ಯದ ರಾಜಕೀಯ ಬೆಳವಣಿಗೆ ನೋಡಿದರೆ ಪ್ರಜಾಪ್ರಭುತ್ವ ಅರ್ಥವನ್ನೇ ಬುಡಮೇಲು ಮಾಡುತ್ತಿರುವ ಪ್ರಯತ್ನಗಳನ್ನು ಕಾಣಬಹುದಾಗಿದೆ.

### ರಾಜ ಮನೆತನದ ಮಹಿಳಾ ಮಾವುತೆಯನ್ನರಸಿ ಬಂದ 'ಪದ್ಮಶ್ರೀ' ಗೌರವ

# ಗಜಪಡೆಯೇ ಇವರ ನೆಚ್ಚಿನ ಮಿತ್ರರು



ಇತ್ತೀಚಿನ ವರ್ಷಗಳಲ್ಲಿ ಪ್ರತಿಷ್ಠಿತ 'ಪದ್ಮಶ್ರೀ' ಪ್ರಶಸ್ತಿಯ ಮೌಲ್ಯ ಹೆಚ್ಚುತ್ತಿದೆ. 'ಅಯ್ಯೋ, ಹೋಗಿ ಹೋಗಿ ಇಂತವರಿಗೂ ಪದ್ಮಶ್ರೀ ಪ್ರಶಸ್ತಿ ಬಂತಾ' ಅಂದುಕೊಳ್ಳುವ ಅವಕಾಶವವೇ ಇಲ್ಲದಂತೆ ಸಾಧಕರನ್ನು ಆಯ್ಕೆ ಮಾಡಲಾಗುತ್ತಿದೆ. ಪ್ರಸಕ್ತ ವರ್ಷದ ಆಯ್ಕೆಯಲ್ಲಿಯೂ ಇದೇ ಪ್ರಕ್ರಿಯೆ ನಡೆದಿದೆ. ವಿಶೇಷವೆಂಬಂತೆ, ಅಸ್ಸಾಂನ ಪಾರ್ವತಿ ಬರುವಾ ಕೂಡ 'ಪದ್ಮಶ್ರೀ' ಗೌರವಕ್ಕೆ ಪಾತ್ರರಾಗಿದ್ದಾರೆ. ಯಾರಿವರು ಪಾರ್ವತಿ ಬರುವಾ?!

ಅಸ್ಸಾಂನಲ್ಲಿ ಮಾನವ–ಆನೆ ಸಂಘರ್ಷವನ್ನು ನಿಯಂತ್ರಿಸುವ ಪ್ರಯತ್ನಕ್ಕಾಗಿ ದೇಶದ ಪ್ರತಿಷ್ಠಿತ 'ಪದ್ಮಶ್ರೀ' ಪ್ರಶಸ್ತಿಗೆ ಭಾಜನರಾದ ಮೊದಲ ಮಹಿಳಾ ಮಾವುತೆ ಎಂಬ ಹೆಗ್ಗಳಿಕೆಗೆ ಪಾರ್ವತಿ ಬರುವಾ ಪಾತ್ರರಾಗಿದ್ದಾರೆ. ಇವರ ಜೀವನವೇ ಮಾದರಿಯಾಗಿದೆ. ಪ್ರತಿಷ್ಠಿತ ರಾಜಮನೆತನದಲ್ಲಿ ಜನಿಸಿದ ಪಾರ್ವತಿ ಬರುವಾ ಸಕಲ ವೈಭೋಗಗಳನ್ನೂ ತೊರೆದು ಸವಾಲುಗಳಿಂದ ತುಂಬಿದ ಜೀವನವನ್ನು ಆಯ್ಕೆ ಮಾಡಿಕೊಂಡಿದ್ದರು. ಆಕೆಯನ್ನು 'ಭಾರತದ ಲೇಡಿ ಮಾವುತ' ಎಂದು ಕರೆಯಲಾಗುತ್ತದೆ. ಗೌರಿಪುರದ ಕೊನೆಯ ರಾಜ ಪ್ರಾಕೃತೀಶ್ ಚಂದ್ರ ಬರುವಾ ಅವರ ಮಗಳು ಪಾರ್ವತಿ ಆನೆಗಳನ್ನು ಪಳಗಿಸುವ ಕಲೆಯನ್ನು ಸಿದ್ಧಿಸಿಕೊಂಡ ಅಪರೂಪದ ಸಾಧಕಿ.

ಕೇವಲ 14ನೇ ವಯಸ್ಸಿನಲ್ಲಿ, ಬರುವಾ ಕಾಡು ಆನೆಯನ್ನು ಪಳಗಿಸುವ ತಮ್ಮ ಮೊದಲ ಕಾರ್ಯಾಚರಣೆಯಲ್ಲಿ ತೊಡಗಿಸಿಕೊಂಡರು. ಇದಕ್ಕಾಗಿ ಅವರ ತಂದೆಯಿಂದ ಅಪಾರ ಪ್ರಶಂಸೆಯೂ ವ್ಯಕ್ತವಾಯಿತು. ಅಂದಿನಿಂದ ಪ್ರಾರಂಭಿಸಿ, ಅವರು ಆನೆ ಬಿಡಾರವನ್ನೇ ಮನೆಯನ್ನಾಗಿಸಿಕೊಂಡರು. ಹಲವು ವರ್ಷಗಳಿಂದ, ಕಾಡಾನೆಗಳನ್ನು ಸೆರೆಹಿಡಿಯಲು ಅಥವಾ ನೋಡಿಕೊಳ್ಳಲು ಪಶ್ಚಿಮ ಬಂಗಾಳ, ಒಡಿಶಾ ಮತ್ತು ಅಸ್ಸಾಂನ ಕಾಡುಗಳು, ಚಹಾ ತೋಟಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಅವರನ್ನು ಅನೇಕ ಬಾರಿ ಕರೆಯಲಾಗಿದೆ.

'ನನ್ನ ಬಾಲ್ಯದಿಂದಲೂ ನಾನು ಆನೆಗಳನ್ನು ನೋಡಿದ್ದೇನೆ. ನಮ್ಮ ಮನೆಯಲ್ಲಿಯೂ ಆನೆಗಳಿದ್ದವು. ಹೀಗಾಗಿ, ಆನೆಗಳ ನಡವಳಿಕೆಯ ಬಗ್ಗೆ ನನಗೆ ಚೆನ್ನಾಗಿ ತಿಳಿದಿತ್ತು. ಆನೆಗಳನ್ನು ಸೆರೆಹಿಡಿಯುವಲ್ಲಿ ನನ್ನ ತಂದೆಗೆ ಸಹಾಯ ಮಾಡಲು ಅನೇಕ ಜನರು ನಮ್ಮ ಮನೆಗೆ ಬರುತ್ತಿದ್ದರು. ಅಲ್ಲಿಯೇ ಆನೆಗಳನ್ನು ಹೇಗೆ ಪಳಗಿಸಲಾಗುತ್ತದೆ ಎಂಬುದನ್ನು ನೋಡುತ್ತಲೇ ಬೆಳೆದೆ' ಎನ್ನುತ್ತಾರೆ ಪಾರ್ವತಿ ಬರುವಾ.

ಆರಂಭದಲ್ಲಿ, ತಂದೆಯೊಂದಿಗೆ ಕಾಡಾನೆ ಸೆರೆ ಹಿಡಿಯುವ ಕಾರ್ಯಾಚರಣೆಯಲ್ಲಿ ಭಾಗಿಯಾಗಲು ತೊಡಗಿದಾಗ, ತಂಡಕ್ಕೆ ಸಹಾಯ ಮಾಡಲು ಹೋಗುತ್ತಿದ್ದರು. ಆದರೆ, ಕಾಡಿನಲ್ಲಿ ಅವರಿಗಾಗಿ ಅಡುಗೆ ಮಾಡುತ್ತಿದ್ದರೇ ಹೊರತು, ಕಾರ್ಯಾಚರಣೆಯಲ್ಲಿ ಪಾಲ್ಗೊಳ್ಳಲು ಅವಕಾಶ ಲಭ್ಯವಾಗುತ್ತಿರಲಿಲ್ಲ. 'ನಿಧಾನವಾಗಿ, ಮಾವುತ, ಆನೆ ಸವಾರ, ತರಬೇತುದಾರ ಅಥವಾ ಕೀಪರ್ ಕೆಲಸಗಳಲ್ಲಿ ನನ್ನ ಆಸಕ್ತಿ ಹೆಚ್ಚುತ್ತಲೇ ಹೋಯಿತು. ಭಾರತದಲ್ಲಿ ಈ ಕೆಲಸದಲ್ಲಿ ಯಾವುದೇ ಮಹಿಳೆ ಭಾಗಿಯಾಗಿಲ್ಲ ಎಂದು ನಾನು ಭಾವಿಸಿದೆ. ಆದ್ದರಿಂದ ನಾನು ಈ ಕಲೆಯನ್ನು ಕಲಿಯಲು ನಿರ್ಧರಿಸಿದೆ.' ಎನ್ನುತ್ತ ಹಿಂದಿನ ದಿನಗಳನ್ನು ನೆನಪಿಸಿಕೊಂಡರು ಪಾರ್ವತಿ.

ರಾಜಮನೆತನದಲ್ಲಿ, ಸಕಲ ಸೌಲಭ್ಯಗಳು, ಹೆಚ್ಚಿನ ಅಕ್ಕರೆಯಿಂದ ಬೆಳೆದ ಹುಡುಗಿಯಾಗಿದ್ದರಿಂದ ಮೊದಲು ಹಿಂಜರಿದರು. ಆದರೆ ನಂತರ, ಅವರ ತಂದೆ ಈ ಕಾರ್ಯದಲ್ಲಿ ಹೆಚ್ಚಿನ ಕೌಶಲ್ಯವನ್ನು ಪಡೆಯಲು ಸಹಾಯ ಮಾಡಿದರು. 'ನಾನು ನನ್ನ ತಂದೆಯ ಬಳಿಗೆ ಹೋಗಿ ನಾನೂ ಮಾವುತನಾಗಬಹುದೇ? ಕಾಡಿನಿಂದ ತಂದ ಆನೆಯನ್ನು ಹೇಗೆ ನೋಡಿಕೊಳ್ಳುವುದು, ಪಳಗಿಸುವುದು ಹೇಗೆ ಎಂದು ಕಲಿಯಬಹುದೇ ಎಂದು ಕೇಳಿದೆ. ಅವರು ಸಕಾರಾತ್ಮಕವಾಗಿ ಉತ್ತರಿಸಿದರು ಮತ್ತು ಕಾಡಾನೆಯನ್ನು ಸೆರೆಹಿಡಿಯಲು ಹೋದಾಗ ಅವರೊಂದಿಗೆ ಪಾಲ್ಗೊಳ್ಳಲು ಅವಕಾಶ ನೀಡಿದರು. ನಂತರ ನಾನು ಕೂಡ ಆನೆ ಸೆರೆಹಿಡಿಯುವ ತಂಡದ ಸದಸ್ಯಳಾದೆ. ನಾನು ಶಿಬಿರಗಳಲ್ಲಿ ಉಳಿದುಕೊಂಡೆ ಮತ್ತು ರಾತ್ರಿಯಲ್ಲಿ ಕಾಡು ಆನೆಗಳನ್ನು ಹುಡುಕಲು ಹೋದೆ. ನನ್ನ ತಂದೆ ಪ್ರಾಕೃತೀಶ್ ಚಂದ್ರ ಬರುವಾ ಅವರೇ ನನ್ನ ಗುರು.'

'ಇದು ತುಂಬಾ ಕಠಿಣ ಕೆಲಸ. ಇದಕ್ಕಾಗಿ ಏಕಾಗ್ರತೆ ಮತ್ತು ಶಕ್ತಿ ಎರಡೂ ಬೇಕು' ಕಾರ್ಯಾಚರಣೆಗಿಳಿದ ಮೊದಲ ದಿನವೇ ತನ್ನ ತಂದೆ ಹೇಳಿದ್ದ ಮಾತನ್ನು ನೆನಪಿಸಿಕೊಂಡರು ಪಾರ್ವತಿ ಬರುವಾ. ಸೆಣಬಿನಿಂದ ಹಗ್ಗವನ್ನು ತಯಾರಿಸುವುದರಿಂದ ಹಿಡಿದು, ಕಾಡಿಗೆ ಹೋಗಿ ಆನೆಯನ್ನು ಸೆರೆಹಿಡಿಯುವವರೆಗಿನ ಎಲ್ಲ ವಿದ್ಯೆಗಳನ್ನೂ ತಂದೆಯಿಂದಲೇ ಕಲಿತರು.

ಸದ್ಯ, 67 ವರ್ಷದ ಪಾರ್ವತಿ ಬರುವಾ ಮಾವುತರಿಗೆ ತರಬೇತಿ ನೀಡುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು. 2000ರಲ್ಲಿ ಪಶ್ಚಿಮ ಬಂಗಾಳ ಸರ್ಕಾರವು ಆನೆ ಗಣತಿಗಾಗಿ ಅರಣ್ಯ ಇಲಾಖೆಗಳಲ್ಲಿ ಮಾವುತರು ಮತ್ತು ಸಿಬ್ಬಂದಿಗೆ ತರಬೇತಿ ಶಿಬಿರಕ್ಕೆ ಅವರನ್ನು ಆಹ್ವಾನಿಸಿತು. ಅಸ್ಸಾಂ ಸರ್ಕಾರದ ಅಸ್ಸಾಂ ಗೌರವ್ ಪ್ರಶಸ್ತಿಯ ಹೊರತಾಗಿ, ಅವರು ವಿಶ್ವಸಂಸ್ಥೆಯ ಪರಿಸರ ಕಾರ್ಯಕ್ರಮದಿಂದ 'ಗ್ಲೋಬಲ್ 500–ರೋಲ್ ಆಫ್ ಹಾನರ್' ಪಡೆದಿದ್ದಾರೆ. ಮತ್ತೆ ಇದೀಗ, ಪ್ರತಿಷ್ಠಿತ 'ಪದ್ಮಶ್ರೀ' ಗೌರವಕ್ಕೆ ಪಾತ್ರರಾಗಿದ್ದಾರೆ.

## ಡಾ. ಪಂ. ಪುಟ್ಟರಾಜ ಸೇವಾ ಸಂಘದಿಂದ ಸಾಧಕರಿಗೆ ಸನ್ಮಾನ




**■ವಿಜಯಸಾಕ್ಷಿ ಸುದ್ದಿ, ಗದಗ**

166ನೇ ವಿಶೇಷ ಮಾಸಿಕ ಸಂಗೀತ ಕಾರ್ಯಕ್ರಮದಲ್ಲಿ ಡಾ. ಪಂ. ಪುಟ್ಟರಾಜ ಸೇವಾ ಸಂಘದ ಗೌರವಾಧ್ಯಕ್ಷರಾದ ಪೂಜ್ಯ ಕಲ್ಲಯ್ಯಜ್ಜನವರು ಮಂಗಲ ಹಸ್ತದಿಂದ 2024ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆಗೊಳಿಸಿದರು.

ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೈದ ಕಲಾವಿದರಾದ ಪಂ. ಸೋಮನಾಥ ಮರ್ಡೂರ. ಧಾರವಾಡ, ಪದ್ಮಶ್ರೀ ಡಾ. ಎಂ.ವೇಕಟೇಶ ಕುಮಾರ ಧಾರವಾಡ, ಅಕ್ಕಮಹಾದೇವಿ ಮಠದ, ಪಂ. ಸಿದ್ದೇಶ್ವರ ಶಾಸ್ತ್ರಿಗಳು ತೆಲ್ಲೂರ ಹಾಗೂ ಎಲ್.ಬಿ. ಶೇಖಮಾಸ್ತರ ವಿಜಯಪುರ ಇವರನ್ನು ಸನ್ಮಾನಿಸಲಾಯಿತು.

ಆಶ್ರಮದ ಮ್ಯಾನೇಜರ್. ಪಂ ಹೇಮರಾಜ ಶಾಸ್ತ್ರೀಗಳು. ಹೇಡ್ಡಿಗೊಂಡ, ಸಂಸ್ಕೃ ಪಾಠಶಾಲೆಯ ಪ್ರಾಧ್ಯಾಪಕರಾದ ಪಂ. ಶಿವಚಲಕುಮಾರ ಸಾಲಿಮಠ, ಡಾ.ಪಂ. ಪುಟ್ಟರಾಜ ಸೇವಾ ಸಂಘದ ಅಧ್ಯಕ್ಷ ವೇ.ಮೂ. ಕಂಟಯ್ಯ ಸ್ವಾಮಿ ಬಾವಾಗಿ, ಆಶ್ರಮದ ಹಿರಿ–ಕಿರಿಯ ಗುರು ಬಂಧುಗಳು ಹಾಗೂ ಆಶ್ರಮದ ಸರ್ವ ಭಕ್ತಾದಿಗಳು ಉಪಸ್ಥಿತರಿದ್ದರು. ವೇ.ಮೂ. ಪಂ. ಕಲ್ಲಿನಾಥ್ ಶಾಸ್ತ್ರಿಗಳು ನಿರೂಪಿಸಿದರು.

## ಸಾವಯವ ಕೃಷಿ ಜಾಗೃತಿ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಮಾಡಳ್ಳಿ ಗ್ರಾಮದ ದಿ. ಗೊಂದೆಪ್ಪ ಚಿಂಚಲಿ ಅವರ ನಿವೇಶನದಲ್ಲಿ ಫೆ.11ರಂದು ಬೆಳಿಗ್ಗೆ 10.30 ಗಂಟೆಗೆ ಗ್ರಾಮೀಣ ಆರೋಗ್ಯ, ಗೋ ಸಾವಯವ ಕೃಷಿ ಜಾಗೃತಿ ಮತ್ತು ಕಾಮಧೇನು ಮಂದಿರ ಉದ್ಘಾಟನೆ ಕಾರ್ಯಕ್ರಮ ನೆರವೇರಲಿದೆ.

ಕಪ್ಪತ್ತಗುಡ್ಡ ನಂದಿವೇರಿ ಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಧಾರವಾರ ಕೃಷಿ ವಿವಿಯ ವಿಜ್ಞಾನಿ ಸಿ.ಆರ್. ಪಾಟೀಲ, ಕೆವಿಕೆ ಹುಲಕೋಟಿಯ ನಾರಾಯಣ ಬಂಡಿ, ಕೃಷಿ ಅಧಿಕಾರಿ ರೇವಣಪ್ಪ ಮನಗೂಳಿ ಹಾಗೂ ಸಾವಯುವ ಕೃಷಿಕರು ಪಾಲ್ಗೊಂಡು ಗೋ ಉತ್ಪನ್ನ, ಮನೆ ಮದ್ದುಗಳು, ಕೃಷಿ ಉಪಕರಣಗಳ ಕುರಿತು ರೈತರಿಗೆ ಮಾಹಿತಿ ನೀಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.




**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಲಕ್ಕುಂಡಿಯಲ್ಲಿ ನಡೆದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ಮಕ್ಕಳು ಪ್ರದರ್ಶಿಸಿದ ಸಂವಿಧಾನ ಜಾಗೃತಿ ನೃತ್ಯ ಗಮನ ಸೆಳೆಯಿತು.

## 'ಸೂಪರ್ ಸಂಸಾರ' ನಾಟಕ ಪ್ರದರ್ಶನ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿದ್ಯಾದಾನ ಸಮಿತಿ, 'ಕಲಾಚೇತನ' ಆಕಾಡೆಮಿ, ಗುರುಕುಲ ಪ್ರಿ ಸ್ಕೂಲ್ ಅರ್ಪಿಸುವ ಸುಂದರ ಕನ್ನಡ ನಗೆನಾಟಕ 'ಸೂಪರ್ ಸಂಸಾರ' ಫೆ.11ರ ಸಂಜೆ 6:30ಕ್ಕೆ ವಿದ್ಯಾದಾನ ಸಮಿತಿ ಶಾಲಾ ಆವರಣದಲ್ಲಿ ಪ್ರದರ್ಶನಗೊಳ್ಳಲಿದೆ.

ನಾಟಕದ ರಚನೆ ಸಂತೋಷ ಪವಾರ್, ಅನುವಾದ ಹಾಗೂ ನಿರ್ದೇಶನ ಮಾಡಿರುವ ಡಾ.ಯಶವಂತ ಸರದೇಶಪಾಂಡೆ ಸೇರಿದಂತೆ ಹುಬ್ಬಳ್ಳಿಯ ಗುರು ಸಂಸ್ಥೆಯ ತಂಡದ ಕಲಾವಿದರು ಅಭಿನಯಿಸುವರು.




ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಹಿರಿಯ ರಂಗಕರ್ಮಿ ಆರ್.ಎನ್. ಕುಲಕರ್ಣಿ, ಸಾಹಿತಿ ಹಾಗೂ ರಂಗಕರ್ಮಿಗಳಾದ ಚಂದ್ರಶೇಖರ ವಸ್ತ್ರದ, ಶಿಕ್ಷಣ ಸಂಘಟಕರಾದ ಶ್ರೀನಿವಾಸ ಹುಯಿಲಗೋಳ ಭಾಗವಹಿಸುವರು. ನಾಟಕದ ಪ್ರವೇಶ ಪತ್ರಗಳು ನೇಸರ ಉಪಾಹಾರ ಮತ್ತು ವಿದ್ಯಾದಾನ ಸಮಿತಿಯಲ್ಲಿ ದೊರೆಯಲಿವೆ. ಹೆಚ್ಚಿನ ಸಂಖ್ಯೆಯಲ್ಲಿ ಪ್ರೇಕ್ಷಕರು ಆಗಮಿಸಿ, ರಂಗಭೂಮಿ ಕಲೆಯನ್ನು ಪ್ರೋತ್ಸಾಹಿಸಬೇಕಾಗಿ ಕಲಾಚೇತನದ ಅಧ್ಯಕ್ಷ ಡಾ. ಕಾವೆಂಶ್ರೀ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ ಧರ್ಮ ಸಮಾರಂಭ

**■ವಿಜಯಸಾಕ್ಷಿ ಸುದ್ದಿ, ಶಿಕಾರಿಪುರ**

ಒಬ್ಬ ಸಾಧಕ ಆಧ್ಯಾತ್ಮವಾದಿಯಾದರೆ ಅದರಲ್ಲಿ ಆಸಕ್ತಿ ತಾಳಿ ಆಳಕ್ಕೆ ಇಳಿದರೆ ಏನೆಲ್ಲವನ್ನು ಸಾಧಿಸಬಲ್ಲ. ಇದಕ್ಕೆ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಉದಾಹರಣೆಯಾಗಿ ಒಂದು ಗುಡ್ಡವನ್ನು ಸುಕ್ಷೇತ್ರವನ್ನಾಗಿ ಪರಿವರ್ತಿಸಿದ್ದಾರೆ ಎಂದು ಹುಬ್ಬಳ್ಳಿ ಶ್ರೀ ಮೂರುಸಾವಿರಮಠದ ಜಗದ್ಗುರು ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಅವರು ಕಡೇನಂದಿಹಳ್ಳಿ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ ಜರುಗಿದ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

59 ವರ್ಷಗಳ ನಂತರ ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣವನ್ನು ಇಂದು ಕೇಳಿ ಸಂತೋಷವಾಯಿತು. ತಮ್ಮ ಬಾಲ್ಯದಲ್ಲಿ ಕೇಳುತ್ತಿದ್ದ ರೇಣುಕರ ಪುರಾಣ ಪ್ರವಚನದ ಫಲವಾಗಿ ಉತ್ತಮ ಸಂಸ್ಕಾರ ದೊರೆಯಿತು, ಅದರ ಫಲವಾಗಿ ಜಗದ್ಗುರುತ್ವ ಪ್ರಾಪ್ತಿಯಾಯಿತು. ಶ್ರೀ ಆದಿ ಜಗದ್ಗುರು ರೇಣುಕಾಚಾರ್ಯರು ಮಹಾನ್ ಕ್ರಿಯಾಯೋಗ ಸಿದ್ಧರಾಗಿದ್ದರು. ಗಗನಗಾಮಿಗಳಾಗಿ ಸಂಚರಿಸಿ ಭಕ್ತರಿಗೆ ಭಕ್ತಿ ಮಾರ್ಗ ಬೋಧಿಸಿದರು. ಅಂತಹ ಶ್ರೀ ಜಗದ್ಗುರು ರೇಣುಕಾಚಾರ್ಯರ 36 ಅಡಿ ಎತ್ತರದ ಮೂರ್ತಿ ನೋಡಿ ಸಂತಸವಾಗಿದೆ. ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶ್ರೀಗಳು ಶ್ರೇಷ್ಠ ಸಾಧಕರಾಗಿ ಮಠವನ್ನು ಕಟ್ಟಿ ಭಕ್ತರಲ್ಲಿ ಆಧ್ಯಾತ್ಮ ಜ್ಞಾನವನ್ನು ಬೆಳೆಸುತ್ತಿದ್ದಾರೆ ಎಂದರು.



ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ಮಾತನಾಡಿದರು. ರಟ್ಟಿಹಳ್ಳಿ ಕಬ್ಬಿಣಕಂಥಿಮಠದ ಶಿವಲಿಂಗ ಶಿವಾಚಾರ್ಯ ಸ್ವಾಮಿಗಳು, ಹಿರೇಮಾಗಡಿ ಶಿವಮೂರ್ತಿ ಮುರುಘರಾಜೇಂದ್ರ ಸ್ವಾಮಿಗಳು ಪಾಲ್ಗೊಂಡು ಉಪದೇಶಾಮೃತ ನೀಡಿದರು. ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯರು, ಕಡೆನಂದಿಹಳ್ಳಿ ವೀರಭದ್ರ ಶಿವಾಚಾರ್ಯರು, ಶಿರಾಳಕೊಪ್ಪದ ಸಿದ್ಧೇಶ್ವರ ಸ್ವಾಮಿಗಳು, ಹಿರೇಮಾಗಡಿ ಶಿವಯೋಗಿ ದೇವರು ಉಪಸ್ಥಿತರಿದ್ದರು.

ಹಿರೇಕೆರೂರಿನ ವೇ.ಚನ್ನೇಶ ಶಾಸ್ತ್ರಿಗಳು ನಿರೂಪಿಸಿದರು. ರೋಣದ ರೇಣುಕಯ್ಯ ಶಾಸ್ತ್ರಿಗಳಿಂದ ಶ್ರೀ ಜಗದ್ಗುರು ರೇಣುಕ ವಿಜಯ ಪುರಾಣ ಪ್ರವಚನ ಜರುಗಿತು. ಸಮಾರಂಭದ ನಂತರ ಚಿಕ್ಕಬೆಂಡಿಗೆರಿ ಶ್ರೀ ರೇವಣಸಿದ್ಧೇಶ್ವರ ದೊಡ್ಡಾಟ ಮಂಡಳಿಯವರು 'ಕುರುಕ್ಷೇತ್ರ' ನಾಟಕ ಪ್ರದರ್ಶನ ಮಾಡಿದರು.

## ಚಿರತೆ ಪತ್ತೆಗೆ ಗಸ್ತು ತಿರುಗುತ್ತಿರುವ ಅರಣ್ಯ ಇಲಾಖೆ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ತಾಲೂಕಿನ ಜೀಗೇರಿ ಗ್ರಾಮದಲ್ಲಿ ಯುವಕರ ಮೇಲೆ ದಾಳಿ ಮಾಡಿದ್ದ ಚಿರತೆ ಶೋಧ ಕಾರ್ಯ ಶುಕ್ರವಾರವೂ ಮುಂದುವರೆಯಿತು.

ಗ್ರಾಮಸ್ಥರ ಜೀವ ಭಯಕ್ಕೆ ಕಾರಣವಾಗಿರುವ ಚಿರತೆಯನ್ನು ಪತ್ತೆ ಹಚ್ಚಿ, ಬೋನಿಗೆ ಕೆಡವಲು ಗಜೇಂದ್ರಗಡ ಆರ್‌ಎಫ್‌ಒ ಪ್ರವೀಣಕುಮಾರ ಸಾಸಿವೆಹಳ್ಳಿ ನೇತೃತ್ವದ 10 ಜನರ ತಂಡವು ಜೀಗೇರಿ, ನಾಗೇಂದ್ರಗಡ, ಕಾಲಕಾಲೇಶ್ವರ, ಭೈರಾಪೂರ ಸೇರಿ ವಿವಿಧ ಗ್ರಾಮಗಳಲ್ಲಿ ಕಾರ್ಯಾಚರಣೆ, ಪಹರೆ ನಡೆಸಿ ಚಿರತೆಯ ಪತ್ತೆ ಕಾರ್ಯ ಕೈಗೊಂಡಿದ್ದಾರೆ. ಜನರ ಓಡಾಟ ಹಾಗೂ ಸಿಬ್ಬಂದಿಯ ಕಾರ್ಯಾಚರಣೆಯ ಕಾವಿನಿಂದ ಚಿರತೆಯು ಸ್ಥಳ ಬದಲಿಸಿದೆಯಾ ಎಂಬ ಅನುಮಾನಕ್ಕೆ ಕಾರಣವಾಗಿದೆ.



ಮುನ್ನೆಚ್ಚರಿಕೆ ಕ್ರಮವಾಗಿ ಅರಣ್ಯ ಇಲಾಖೆಯು ಜೀಗೇರಿ ಗ್ರಾಮದಲ್ಲಿ 2 ಬೋನುಗಳನ್ನು ಹಾಗೂ ನಾಗೇಂದ್ರಗಡ ಗ್ರಾಮದಲ್ಲಿ 1 ಬೋನು ಇರಿಸಿದ್ದು, ಜೀಗೇರಿ ಸೇರಿ ಸುತ್ತಲಿನ ಗ್ರಾಮಗಳ ಗ್ರಾಮಸ್ಥರು ಎಚ್ಚರಿಕೆಯಿಂದ ಇರುವಂತೆ ಸೂಚಿಸಿದೆ. ಚಿರತೆ ಓಡಾಟದ ಬಗ್ಗೆ ಸುಳಿವು ಅಥವಾ ಅನುಮಾನ ವ್ಯಕ್ತವಾದರೆ ಇಲಾಖೆಯ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ಮಾಹಿತಿ ನೀಡುವಂತೆ ಅಧಿಕಾರಿಗಳು ಗ್ರಾಮಸ್ಥರಲ್ಲಿ ಮನವಿ ಮಾಡಿದ್ದಾರೆ.

ಸಮೀಪದ ಜೀಗೇರಿ ಗ್ರಾಮದ ಗುಡ್ಡಗಾಡು ಹಾಗೂ ತೋಟಗಳ ಮೇಲೆ ಹದ್ದಿನ ಕಣ್ಣಿಟ್ಟಿರುವ ಅರಣ್ಯ ಇಲಾಖೆಯ ಸಿಬ್ಬಂದಿಗಳು ಜನರು ತಿಳಿಸಿದ ಸ್ಥಳಕ್ಕೆ ತೆರಳಿ ಚಿರತೆ ಓಡಾಡಿದ ಗುರುತುಗಳ ಪತ್ತೆಗೆ ಮುಂದಾಗಿದ್ದಾರೆ. ಆದರೆ ಗ್ರಾಮಸ್ಥರು ಚಿರತೆ ಬಂದಿತ್ತು ಎಂಬ ಸ್ಥಳದಲ್ಲಿ ಚಿರತೆಯ ಕುರುಹುಗಳು ಸಿಗದಿರುವುದು ಸಿಬ್ಬಂದಿಗಳಲ್ಲಿ ನಿರಾಶೆ ಮೂಡಿಸುತ್ತಿದೆ.

## ಬಿಜೆಪಿಯಿಂದ 'ಗ್ರಾಮ ಚಲೋ' ಅಭಿಯಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಘಟಕದ ವತಿಯಿಂದ 'ಗ್ರಾಮ ಚಲೋ' ಅಭಿಯಾನ ಜರುಗಲಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಅವರು, ಭಾರತೀಯ ಜನತಾ ಪಾರ್ಟಿಯಿಂದ ಫೆ 9, 10, 11 ಗ್ರಾಮ ಚಲೋ ಅಭಿಯಾನ ಜಿಲ್ಲೆಯ ಒಟ್ಟು 957 ಬೂತ್‌ಗಳಲ್ಲಿ ಜರುಗಲಿದೆ. ಕಾರ್ಯಕರ್ತರು, ಬಿಜೆಪಿ ಮುಖಂಡರು ತಮ್ಮ ಬೂತ್‌ನ್ನು ಬಿಟ್ಟು, ಬೇರೆ ಗ್ರಾಮದ ಬೂತ್‌ಗೆ ತೆರಳಿ ಅಭಿಯಾನದಲ್ಲಿ ಭಾಗಿಯಾಗಲಿದ್ದಾರೆ. ಒಂದು ಸಂಪೂರ್ಣ ದಿನವನ್ನು ಆ ಬೂತ್‌ನಲ್ಲಿಯೇ ಕಳೆಯಲಿದ್ದಾರೆ. ಈ ಅಭಿಯಾನದಲ್ಲಿ, ಶಾಸಕರು, ಸಂಸದರು, ಮಾಜಿ ಶಾಸಕರು, ಜಿಲ್ಲಾಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಎಲ್ಲ ಹಂತದ ಪದಾಧಿಕಾರಿಗಳಿಗೆ ಒಂದೊಂದು ಗ್ರಾಮದ ಬೂತ್‌ಗಳನ್ನು ಆಯ್ಕೆ ಮಾಡಿಕೊಂಡು ಅಭಿಯಾನ ಮಾಡಲಿದ್ದಾರೆ.



ಕೇಂದ್ರ ಸರ್ಕಾರದ ಸಾಧನೆಗಳ ಕರಪತ್ರವನ್ನು ಮನೆ ಮನೆಗೆ ತಲುಪಿಸುವುದು, ಗ್ರಾಮದಲ್ಲಿರುವ ಬೂತ್ ಅಧ್ಯಕ್ಷರ ಮನೆಗೆ ಭೇಟಿ, ಬೂತ್ ಸಮಿತಿ ಹಾಗೂ ಪೇಜ್ ಪ್ರಮುಖರ ಪರಿಶೀಲನೆ, ಗೋಡೆ ಬರಹ ಅಭಿಯಾನ, ಬೂತ್‌ನಲ್ಲಿರುವ ಸಾಧಕರ ಭೇಟಿ, ಕೇಂದ್ರ ಸರ್ಕಾರದ ಫಲಾನುಭವಿಗಳ ಭೇಟಿ, ನವ ಮತದಾರರ ಭೇಟಿ ಕಾರ್ಯ ಜರುಗಲಿದೆ ಎಂದು ತಿಳಿಸಿದ್ದಾರೆ.

# ಫಲ-ಪುಷ್ಪ ಲೋಕ ಅನಾವರಣ

▸▸ಮೊದಲನೇ ಪುಟದಿಂದ



**ಚಿತ್ತಾಕರ್ಷಕ ಪ್ರದರ್ಶನಗಳು:** ಮತ್ತೊಂದೆಡೆ ಗದಗ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಬೆಳೆದಿರುವ ತಾಳೆ, ಸೇವಂತಿಗೆ, ಚೆಂಡು ಹೂವು, ಲಿಂಬೆ, ಹೂಕೋಸು, ಟೊಮ್ಯಾಟೊ, ಹುಣಸೆ, ಪಪ್ಪಾಯಿ, ಕಪ್ಪು ದ್ರಾಕ್ಷಿ, ದ್ರಾಕ್ಷಿ, ಪೇರಲ, ಚಿಕ್ಕು, ಮಾವು, ನುಗ್ಗೆಕಾಯಿ, ಹೀರೇಕಾಯಿ, ಬಾಳೆ, ಯಾಲಕ್ಕಿ ಬಾಳೆ, ಈರುಳ್ಳಿ, ಚಕ್ಕೋತಾ, ಗೋಡಂಬಿ, ವಿಳ್ಳೆದೆಲೆ ಸೇರಿ ವಿವಿಧ ತರಕಾರಿ, ಹಣ್ಣುಗಳು, ಹೂವುಗಳು ಸಾರ್ವಜನಿಕರನ್ನು ಆಕರ್ಷಿಸಿದವು. ಅದರಲ್ಲೂ ನೋಡಲು ಹಾಗೂ ತಿನ್ನಲು ಅಪರೂಪವಾದ ರಾಮ ಫಲ, ಸೀತಾ ಫಲ, ಸ್ಟಾರ್ ಫ್ರೂಟ್ ಗಮನ ಸೆಳೆದವು.

ಫಲ-ಪುಷ್ಪ ಪ್ರದರ್ಶನದಲ್ಲಿ ಮೀನುಗಾರಿಕೆ ಇಲಾಖೆ ಕೂಡ ವಿವಿಧ ಬಗೆಯ ಮೀನುಗಳನ್ನು ಸಾರ್ವಜನಿಕರಿಗೆ ಪರಿಚಯಿಸಿತು. ಆಸ್ಕರ್ ಫಿಶ್, ಟೈಗರ್ ಬರ್ಬ್, ಕಲರ್ ವಿಡೋವ್ ಟೆಟ್ರಾ, ಬ್ಲಾಕ್ ಮೋರ್ ಫಿಶ್, ಗಪ್ಪಿ ಫಿಶ್, ಬ್ಲಾಕ್ ಘೋಸ್ಟ್ ಫಿಶ್, ಗೋಲ್ಡ್ ಫಿಶ್, ಟೈಗರ್ ಶಾರ್ಕ್, ಅಂಜೆಲ್, ಫ್ಲಾವರ್ ಹಾರ್ನ್ ಫಿಶ್‌ಗಳನ್ನು ಸಾರ್ವಜನಿಕರು ನೋಡಿ ಕಣ್ತುಂಬಿಕೊಂಡರು.

ಪ್ರದರ್ಶನದಲ್ಲಿ ರಂಗೋಲಿಯಲ್ಲಿ ಗಾನಯೋಗಿ ಪುಟ್ಟರಾಜ ಗವಾಯಿಗಳು, ತೋಂಟದ ಸಿದ್ದಲಿಂಗ ಶ್ರೀಗಳು ಹಾಗೂ ಜ್ಞಾನಯೋಗಿ ಸಿದ್ದೇಶ್ವರ ಶ್ರೀಗಳ ಚಿತ್ತಾರಗಳು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾದವು.

ವಿಶ್ವನಾಥ ಎಸ್. ಯಲಬುರ್ಗಿಯವರು ಸಂಗ್ರಹಿಸಿ ಪೋಷಣೆ ಮಾಡಿ ಬೆಳೆಸಿದ ಬೊನ್ಸಾಯಿ ಮರಗಳ ಪ್ರದರ್ಶನ, ಪ್ರಸನ್ನ ಮೇವುಂಡಿ ಅವರ ವಿಶೇಷ ಅಲಂಕಾರಿಕ ಗಿಡಗಳು ಸಹ ಪ್ರದರ್ಶನಗೊಂಡವು.

### ಸಂಸ್ಕೃತಿ ಸಂವರ್ಧನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ವೈಚಾರಿಕತೆಯಿರಲಿ, ನಾಸ್ತಿಕ ಮನೋಭಾವ ಬೇಡ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸಮಾಜದ ಓರೆ-ಕೋರೆಗಳನ್ನು ತಿದ್ದಿ ಮುನ್ನಡೆಸುವುದೇ ಮಹಾನುಭಾವರ ಆದ್ಯ ಕರ್ತವ್ಯವಾಗಿದೆ. ಧರ್ಮಾಚರಣೆ ಇಲ್ಲದ ಮನುಷ್ಯನ ವ್ಯಕ್ತಿತ್ವಕ್ಕೆ ಬೆಲೆ-ನೆಲೆ ಸಿಗಲಾರದು. ಮನುಷ್ಯನಲ್ಲಿ ವೈಚಾರಿಕತೆ ಬೆಳೆದು ಬರಲಿ. ಆದರೆ ನಾಸ್ತಿಕ ಮನೋಭಾವ ಬೆಳೆಯಬಾರದು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆಯ ಸಭಾಂಗಣದಲ್ಲಿ ಜರುಗಿದ ಸಂಸ್ಕೃತಿ ಸಂವರ್ಧನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಅಸತ್ಯದಿಂದ ಸತ್ಯ ಸಾಕ್ಷಾತ್ಕಾರದೆಡೆಗೆ, ಕತ್ತಲೆಯಿಂದ ಬೆಳಕಿನೆಡೆಗೆ, ಸಾವಿನಿಂದ ಸಾವಿಲ್ಲದೆಡೆಗೆ ಮುನ್ನಡೆವ ಗುರಿ ಮನುಷ್ಯನದಾಗಬೇಕು. ಮನುಷ್ಯನ ದೈಹಿಕ ವಿಕಾಸಕ್ಕೆ ಆಹಾರ-ನೀರು ಬೇಕು. ಬದುಕಿನ ವಿಕಾಸಕ್ಕೆ ಧರ್ಮಾಚರಣೆ ಬೇಕು. ಜೀವನದಲ್ಲಿ ಸಂಪತ್ತು ಸಂಪಾದಿಸದಿದ್ದರೂ ಚಿಂತೆಯಿಲ್ಲ. ಆದರೆ ಸದ್ಗುಣಗಳನ್ನು ಸಂಪಾದಿಸಿಕೊಳ್ಳುವುದನ್ನು ಮರೆಯಬಾರದು. ಅತಿ ಶತ್ರುಗಳನ್ನು ನಿಯಂತ್ರಿಸಬಹುದು. ಆದರೆ ಮತಿ ಶತ್ರುಗಳನ್ನು ನಿಯಂತ್ರಿಸುವುದು ಕಷ್ಟ. ಶ್ರೀ ವೀರಭದ್ರಸ್ವಾಮಿಯ ಕ್ರಿಯಾ ಕರ್ತೃತ್ವ ಶಕ್ತಿ ಅಮೋಘ. ದುಷ್ಟ ಶಕ್ತಿಗಳ ದಮನ, ಸಾತ್ವಿಕ ಶಕ್ತಿಗಳ ಸಂವರ್ಧನೆಗಾಗಿ ವೀರಭದ್ರಸ್ವಾಮಿ ಅವತಾರ ತಾಳಿ ಬಂದಿದ್ದಾನೆ. ವೀರಶೈವ ಧರ್ಮದಲ್ಲಿ ಜೀವ ಶಿವನಾಗುವ ಸಾಧನಾ ಮಾರ್ಗವನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ ಎಂದರು.

ಎಸ್.ಜೆ.ಆರ್. ವಿದ್ಯಾ ಸಂಸ್ಥೆ ಅಧ್ಯಕ್ಷ ಯು.ಎಂ. ಬಸವರಾಜ 'ರಂಭಾಪುರಿ ಬೆಳಗು' ಮಾಸ ಪತ್ರಿಕೆ ಬಿಡುಗಡೆ ಮಾಡಿ ಮಾತನಾಡಿ, ಬಾಳಿನ ಭಾಗ್ಯೋದಯಕ್ಕೆ ಧರ್ಮ ಜ್ಞಾನದ ಅವಶ್ಯಕತೆಯಿದೆ. ವೀರಶೈವ ಲಿಂಗಾಯತ ಧರ್ಮದ ಇತಿಹಾಸ ಮತ್ತು ಆದರ್ಶ ಪರಂಪರೆ ಮರೆಯುವಂತಿಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ತತ್ವ-ಸಿದ್ಧಾಂತ, ಬಸವಾದಿ ಶರಣರ ಸಾಮಾಜಿಕ ಕಳಕಳಿಯನ್ನು ಅರಿತು ಬಾಳಿದರೆ ಸಮಾಜ ಸುಭದ್ರಗೊಳ್ಳಲು ಸಾಧ್ಯವಾಗುವುದೆಂದರು.

ನಾಗಲಾಪುರ ತೇಜೇಶಲಿಂಗ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಧನಗೂರು ಬೃಹನ್ಮಠದ ಮುಮ್ಮಡಿ ಷಡಕ್ಷರ ಶಿವಾಚಾರ್ಯರು ಗುರು ಹಿರಿಮೆ ಕುರಿತು ಉಪದೇಶಾಮೃತವನ್ನಿತ್ತರು. ಸಣ್ಣ ನೀರಾವರಿ ಇಲಾಖೆ ಜಂಟಿ ಕಾರ್ಯದರ್ಶಿ ಪಂಪನಗೌಡ್ರು ಮೇಲ್ಸೀಮೆ, ಗುಬ್ಬಿ ತೋಟದಪ್ಪ ಛತ್ರದ ಕಾರ್ಯದರ್ಶಿ ಎಂ.ಸದಾಶಿವಯ್ಯ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ರಾಜಾಪುರ ಸಂಸ್ಥಾನಮಠದ ಡಾ.ರಾಜೇಶ್ವರ ಶಿವಾಚಾರ್ಯರು ಸಮಾರಂಭದ ನೇತೃತ್ವ ವಹಿಸಿದರೆ ದೊಡ್ಡಗುಣಿ ಹಿರೇಮಠದ ರೇವಣಸಿದ್ಧೇಶ್ವರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು.

ಹಲವಾರು ಗಣ್ಯರು ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಜಿ.ಜಿ. ರಕ್ಷಿತಾ ಅವರಿಂದ ಭರತ ನಾಟ್ಯ, ಶಿವಶಂಕರ ಶಾಸ್ತ್ರಿಗಳಿಂದ ಭಕ್ತಿಗೀತೆ ಜರುಗಿತು. ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು ನಿರೂಪಿಸಿದರು. ಬೆಳಿಗ್ಗೆ ಚಿಕ್ಕಪೇಟೆ ಮಹಂತಿನಮಠದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಬಂದ ಭಕ್ತರಿಗೆ ಶುಭ ಹಾರೈಸಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪೂಜಾ ಸಮಾರಂಭದಲ್ಲಿ ಪಾಲ್ಗೊಂಡು ಶ್ರೀ ಜಗದ್ಗುರುಗಳ ಆಶೀರ್ವಾದ ಪಡೆದರು.



ಪತ್ರಕರ್ತ ಪ್ರಶಾಂತ ರಿಪ್ಪನ್‌ಪೇಟೆ ಮಾತನಾಡಿ, ಇಂದಿನ ವಿಜ್ಞಾನ ಯುಗದಲ್ಲೂ ಸಹ ವೀರಭದ್ರಸ್ವಾಮಿಯ ಲೀಲೆ, ಪವಾಡಗಳನ್ನು ಬೇಧಿಸಲು ಸಾಧ್ಯವಾಗಿಲ್ಲ. ಶಿವ ಸಂಸ್ಕೃತಿಯ ಸಂವರ್ಧನೆಗಾಗಿ ಅವತರಿಸಿದ ಕಾರಣಿಕ ಪುರುಷ. ವೀರಶೈವರಷ್ಟೇ ಅಲ್ಲ. ವೀರಶೈವೇತರರೂ ಕೂಡಾ ವೀರಭದ್ರಸ್ವಾಮಿಗೆ ಪೂಜೆ ಸಲ್ಲಿಸುತ್ತಿರುವುದನ್ನು ಕಾಣಬಹುದು. ರಂಭಾಪುರಿ ಪೀಠದ ಕ್ಷೇತ್ರನಾಥನಾಗಿ ಮತ್ತು ಗೋತ್ರಪುರುಷನಾಗಿ ಪೂಜೆಗೊಳ್ಳುವ ವೀರಭದ್ರಸ್ವಾಮಿ ನಾಡಿನೆಲ್ಲೆಡೆ ಪೂಜೆಗೊಳ್ಳುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

### ಸಿಪಿಐ(ಎಂ) ಸಂಘಟನೆಯಿಂದ ತಹಸೀಲ್ದಾರ್ ಕಚೇರಿಯೆದುರು ಪ್ರತಿಭಟನೆ

# ಅನುದಾನ ಹಂಚಿಕೆಯಲ್ಲಿ ರಾಜ್ಯಕ್ಕೆ ತಾರತಮ್ಯ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಅನುದಾನ ಹಂಚಿಕೆ ತಾರತಮ್ಯ ಖಂಡಿಸಿ ಕೇಂದ್ರ ಸರ್ಕಾರದ ವಿರುದ್ಧ ರಾಜ್ಯ ಸರ್ಕಾರ ಹಾಗೂ ಕೇರಳ ಸರ್ಕಾರಗಳು ನಡೆಸಿದ ಹೋರಾಟ ಬೆಂಬಲಿಸಿ ಇಲ್ಲಿನ ಸಿಪಿಐ(ಎಂ) ಸಂಘಟನೆಯಿಂದ ತಹಸೀಲ್ದಾರ್ ಕಚೇರಿಯೆದುರು ಪ್ರತಿಭಟನೆ ನಡೆಸಿದರು.

ಸಂಘಟನೆಯ ಮುಖಂಡ ಪೀರು ರಾಠೋಡ ಮಾತನಾಡಿ, ಕೇಂದ್ರ ಸರ್ಕಾರವು ರಾಜ್ಯಕ್ಕೆ ಅನುದಾನ ಹಂಚಿಕೆಯಲ್ಲಿ ಸಾಕಷ್ಟು ತಾರತಮ್ಯ ಮಾಡುತ್ತಿದ್ದು, ದಕ್ಷಿಣ ಭಾರತದ ರಾಜ್ಯಗಳನ್ನು ನಿರ್ಲಕ್ಷ್ಯ ಮಾಡುತ್ತಿದೆ. ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಕೆಲ ರಾಜ್ಯಗಳ ಮೇಲೆ ತನ್ನ ಅಧಿಕಾರ ದುರಪಯೋಗ, ಹಸ್ತಕ್ಷೇಪದ ಮೂಲಕ ಒಕ್ಕೂಟ ವ್ಯವಸ್ಥೆಗೆ ಭಂಗ ತರಲು ಯತ್ನಿಸುತ್ತಿದೆ ಎಂದು ದೂರಿದ ಅವರು, ಹನುಮ ಧ್ವಜವನ್ನು ಕಟ್ಟಿದರೆ ಮಾತ್ರ ಹನುಮ ಜಯಂತಿ ಎಂದು ಬಿಜೆಪಿ ಹನುಮ ಜಯಂತಿ ಆಚರಿಸಲು ಯತ್ನಿಸುತ್ತಿದೆ ಎಂದು ದೂರಿದರು.

ದೇಶವನ್ನು ಅಭಿವೃದ್ಧಿ ಪತದತ್ತ ಸಾಗಿಸಲು ಶ್ರಮಿಸಬೇಕಿದ್ದ ಸರ್ಕಾರ ಸೂಕ್ಷ್ಮ ವಿಷಯಗಳನ್ನು ಮುಂದಿಟ್ಟುಕೊಂಡು ದೇಶವನ್ನು ಆಳಲೆತ್ನಿಸುತ್ತಿದೆ.

ಅನುದಾನ ಹಂಚಿಕೆ ವಿಷಯವನ್ನು ಪ್ರಸ್ತಾಪಿಸಿದರೆ ಮೋದಿ ಸರ್ಕಾರ ಅದರ ಬಗ್ಗೆ ಉತ್ತರ ನೀಡುವದಿಲ್ಲ. ರೈತರ, ದೀನದಲಿತರ ಬಗೆಗಿನ ಸಮಸ್ಯೆಗಳಿಗೆ ಪರಿಹಾರ ಒದಗಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು.

ಪ್ರತಿಭಟನಾಕಾರರು ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಅವರಿಗೆ ಮನವಿ ಸಲ್ಲಿಸಿದರು. ಮೈಬು ಹವಾಲ್ದಾರ್, ಬಾಲು ರಾಠೋಡ, ತುಕರಾಂ ಚವ್ಹಾಣ, ಅಂದಪ್ಪ ಕುರಿ, ಆನಂದ ರಾಠೋಡ, ರೇಣುಕಪ್ಪ ರಾಠೋಡ, ಚನ್ನಪ್ಪ ಗುಗಲೋತ್ತರ, ವಿರೇಶ ಇಟಗಿ ಮುಂತಾದವರಿದ್ದರು.




ಮುಖಂಡ ಮಾರತಿ ಚಿಟಗಿ ಮಾತನಾಡಿ, ಕೇಂದ್ರ ಪ್ರಾಯೋಜಿತ ಯೋಜನೆಗಳ ರಾಜ್ಯಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ಒಕ್ಕೂಟ ಸರ್ಕಾರವು ಮಧ್ಯಪ್ರವೇಶ ಮಾಡಬಾರದು. ರಾಜ್ಯದಲ್ಲಿ ಬರಗಾಲ ಪರಿಹಾರದ ಭಾಗವಾಗಿ ಕೃಷಿ ಕೂಲಿಕಾರರಿಗೆ, ಅಸಂಘಟಿತ ಕಾರ್ಮಿಕರಿಗೆ ಸೂಕ್ತ ಪರಿಹಾರ ನೀಡಬೇಕು ಹಾಗೂ ದಕ್ಷಿಣ ರಾಜ್ಯಗಳಿಗೆ ಅನುದಾನ ಹಂಚಿಕೆಯಲ್ಲಿ ಮಾಡುತ್ತಿರುವ ತಾರತಮ್ಯ ನೀತಿಯನ್ನು ಕೈಬಿಡಬೇಕು ಎಂದ ಒತ್ತಾಯಿಸಿದರು.

# ನಿರಂತರ ಅಧ್ಯಯನವೇ ಸಾಧನೆಗೆ ದಾರಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ನಿರಂತರ ಅಧ್ಯಯನದಿಂದ ಗುರಿ ಸಾಧಿಸಿದಾಗ ಉತ್ತಮ ಭವಿಷ್ಯದ ದಾರಿ ಕಾಣಲು ಸಾಧ್ಯವಾಗುತ್ತದೆ ಎಂದು ಮುಖ್ಯೋಪಾಧ್ಯಾಯ ಜಯಶ್ರೀ ಏಕಬೋಟೆ ಹೇಳಿದರು.

ಅವರು ಪಟ್ಟಣದ ಸಮಿಪದ ನಾಗಾವಿ ಗ್ರಾಮದ ವಿರೂಪಾಕ್ಷಪ್ಪ ಸೋಮಪ್ಪ ಚಿಂಚಲಿ ಉನ್ನತೀಕರಿಸಿದ ಸರಕಾರಿ ಪ್ರೌಢಶಾಲೆಯಲ್ಲಿ ಗ್ರಾಹರಕ ವೇದಿಕೆ ವತಿಯಿಂದ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಹಾಗೂ ಪಾಲಕರ ಸಭೆ ಉದ್ದೇಶಿಸಿ ಮಾತನಾಡಿದರು.

ಇಂದಿನ ಮಕ್ಕಳೇ ನಾಳಿನ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಬೇಕಾದರೆ ಮೊಬೈಲ್, ಟಿವ್ಹಿ ಮಾಧ್ಯಮಗಳಿಂದ ಮಕ್ಕಳು ದೂರವಿದ್ದು, ಅಭ್ಯಾಸದ ಕಡೆ ಗಮನವಿರಿಸಿ. ಅಭ್ಯಾಸದಲ್ಲಿ ಸತತ ಪ್ರಯತ್ನಪಟ್ಟಲ್ಲಿ ಗುರಿ ಹೊಂದಲು ಸಾಧ್ಯವಾಗುತ್ತದೆ ಎಂದರು.

ವಿರೂಪಾಕ್ಷಪ್ಪ ಸೋಮಪ್ಪ ಚಿಂಚಲಿ ಅವರ ಅಭಿಮಾನಿ ಬಳಗದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಗಳಿಸಿದವರಿಗೆ ನಗದು ಬಹುಮಾನ ಘೋಷಿಸಿದರು. ಎ.ಬಿ. ಗುರ್ಲಹೊಸೂರ, ಜೆ.ಎಂ. ಮುತ್ತಿನಪೆಂಡಿಮಠ, ಎಂ.ಎಂ. ಬಾಗಲಿ, ಎ.ಎ. ಬಂಡಿವಾಡಮಠ, ಜೆ.ಎಸ್. ಚಲವಾದಿ, ವಿ.ಎಮ್. ಖ್ಯಾಡದ, ಎಸ್.ಎಸ್. ಹತ್ತಿ, ಎಂ.ವ್ಹಿ. ಹಿರೇಮಠ, ಎಸ್‌ಡಿಎಂಸಿ ಅಧ್ಯಕ್ಷ ಮಲ್ಲಪ್ಪ ಗೋಲಪ್ಪನವರ, ಸದಸ್ಯರಾದ ರೇಖಾ ರಂಗನಗೌಡರ ಹಾಗೂ ಪಾಲಕರು ಇದ್ದರು.

# ಉಜ್ವಲ ಯೋಜನೆಯಡಿ ಗ್ಯಾಸ್ ವಿತರಣೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಇಲ್ಲಿನ ನೀಲಗುಂದ ಗ್ರಾಮದ ಮಹಿಳೆಯರಿಗೆ ಉಜ್ವಲ ಯೋಜನೆಯಡಿ ಉಚಿತ ಗ್ಯಾಸ್ ಸಿಲಿಂಡರ್ ವಿತರಿಸಲಾಯಿತು.

ಗದಗ ತಾಲೂಕಾ ಹಿಂದುಳಿದ ವರ್ಗಗಳ ಅಧ್ಯಕ್ಷ ರವಿ ವಗ್ಗನವರ ಮಾತನಾಡಿ, ಮಹಿಳೆಯರ ಆರೋಗ್ಯದ ಹಿತದೃಷ್ಟಿಯಿಂದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷಿ ಉಜ್ವಲ ಗ್ಯಾಸ್ ಯೋಜನೆ ಕೋಟ್ಯಾಂತರ ಬಡ ಕುಟುಂಬಗಳಿಗೆ ಆಸರೆಯಾಗಿದೆ. ಇದರ ಸದುಪಯೋಗವನ್ನು ಅರ್ಹ ಮಹಿಳೆಯರು ಪಡೆದುಕೊಳ್ಳಬೇಕು ಎಂದರು.

ಬಸವಣ್ಣೆಪ್ಪ ಕುರ್ತಕೋಟಿ, ಗಂಗಪ್ಪ ಮಡಿವಾಳರ, ಅಶೋಕ ನಾಯ್ಕರ್, ಲತಾ ತಿರ್ಲಾಪೂರ, ಮಂಜುಳಾ ಮಡಿವಾಳರ, ಚೈತ್ರಾ ಹುಲ್ಲೂರ, ಸುಧಾ ಗಡ್ಡಿ, ರೇಣುಕಾ ಹಳ್ಳಾಳ, ದ್ರಾಕ್ಷಾಯಣಿ ಹಡಪದ, ದಾನೇಶ್ವರಿ ಪಟ್ಟಣಶೆಟ್ಟಿ, ಬಸವ್ವ ಚಿಕ್ಕಗಸಿ, ಕಾಶವ್ವ ಬಂಗಾರಿ ಮುಂತಾದವರಿದ್ದರು.

# ಶರಣರು ಇಡೀ ಸಮಾಜದ ಆಸ್ತಿ

▸▸ಮೊದಲನೇ ಪುಟದಿಂದ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಾಯಕ ಶರಣರು ಆಧ್ಯಾತ್ಮದ ಜೊತೆಗೆ ಪ್ರಜಾಪ್ರಭುತ್ವದ ಮಾದರಿಯನ್ನು ತೋರಿಸಿಕೊಟ್ಟು, ಸಮಾಜದಲ್ಲಿ ಯಾವುದೇ ಕಾಯಕ ಸಣ್ಣದಲ್ಲ ಎಂಬ ಸಂದೇಶ ಸಾರಿದ ಶರಣರ ತತ್ವಗಳು ಎಲ್ಲರಿಗೂ ಆದರ್ಶಪ್ರಾಯವಾಗಿವೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಕಾಯಕ ಶರಣರಾದ ಶರಣ ಮಾದಾರ ಚೆನ್ನಯ್ಯ, ಶರಣ ಸಮಗಾರ ಹರಳಯ್ಯ, ಶರಣ ಡೋಹರ ಕಕ್ಕಯ್ಯನವರ ಜಯಂತಿಯ ಅಂಗವಾಗಿ ಶರಣರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಗೌರವ ಸಮರ್ಪಿಸಿ ಅವರು ಮಾತನಡಿದರು.

ಶರಣರ ವಚನಗಳು ಸಂವಿಧಾನ ರಚನೆಯಲ್ಲಿ ಅಗಾಧವಾದ ಪರಿಣಾಮ ಬೀರಿವೆ. ಶರಣ ಮಾದಾರ ಚೆನ್ನಯ್ಯ, ಶರಣ ಸಮಗಾರ ಹರಳಯ್ಯ, ಶರಣ ಡೋಹರ ಕಕ್ಕಯ್ಯ ಅವರುಗಳು ಬಡತನದಲ್ಲಿ ಮಾಡುವ ಕಾಯಕಗಳು ಹಿರಿಮೆ ಇವೆ ಎಂದು ಸ್ವಾಭಿಮಾನದಿಂದ ಬದುಕಿದ ಮಹಾನುಭಾವರಾಗಿದ್ದಾರೆ ಎಂದರು.

ಶರಣರ ಜಯಂತಿಗಳು ಕೇವಲ ಅದೇ ಸಮುದಾಯಕ್ಕೆ ಸೀಮಿತವಾಗಿರುವದು ದುರ್ದೈವದ ಸಂಗತಿಯಾಗಿದೆ. ಮುಂದಿನ ಜಯಂತಿಗಳಲ್ಲಿ ಸಮುದಾಯದ ಜನ ಸೇರಿದಂತೆ ಎಲ್ಲರೂ ಪಾಲ್ಗೊಳ್ಳುವ ಮೂಲಕ ಶರಣ

### ಶ್ರೀ ಜ. ರೇಣುಕಾಚಾರ್ಯ ಕಾಲೇಜು ಸಭಾಂಗಣದಲ್ಲಿ ಸಂಸ್ಕೃತಿ ಸಂವರ್ಧನಾ ಸಮಾರಂಭ

# ವ್ಯಕ್ತಿತ್ವ ವಿಕಸನವೇ ಧರ್ಮದ ಗುರಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಧರ್ಮ ಮತ್ತು ದೇಶ ಇವೆರಡೂ ಮನುಷ್ಯನ ಎರಡು ಕಣ್ಣುಗಳು. ಸಂಸ್ಕೃತಿ, ಸಭ್ಯತೆ, ಸಾಮರಸ್ಯ ಬೆಳೆಸುವುದೇ ಧರ್ಮದ ಗುರಿಯಾಗಿದೆ. ವ್ಯಕ್ತಿತ್ವ ವಿಕಸನಕ್ಕೆ ವೀರಶೈವ ಧರ್ಮ ಸದಾ ಶ್ರಮಿಸುತ್ತಾ ಬಂದಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಆನಂದರಾವ್ ಸರ್ಕಲ್ ಬಳಿಯ ಶ್ರೀ ಜಗದ್ಗುರು ರೇಣುಕಾಚಾರ್ಯ ಕಾಲೇಜಿನ ಸಭಾಂಗಣದಲ್ಲಿ ಜರುಗಿದ ಸಂಸ್ಕೃತಿ ಸಂವರ್ಧನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಶಾಸಕ ಕೆ.ಗೋಪಾಲಯ್ಯ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಪ್ರಾಧ್ಯಾಪಕಿ ಡಾ. ಮಮತಾ ಸಾಲಿಮಠ ಅವರು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಜ್ಞಾನ ಕ್ರಿಯಾತ್ಮಕ ವಿಚಾರ ಧಾರೆ ಕುರಿತು ಉಪನ್ಯಾಸವಿತ್ತರು. ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿ ವೀರಶೈವ ಧರ್ಮದಲ್ಲಿ ಗುರುವಿಗೆ ಪ್ರಥಮ ಸ್ಥಾನವಿದೆ. ಜೀವನ ವಿಕಾಸಕ್ಕೆ ಗುರು ಮಾರ್ಗದರ್ಶನ ಅವಶ್ಯಕವೆಂದರು.

ನೇತೃತ್ವ ವಹಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು ಮಾತನಾಡಿದರು. ಚಿಕ್ಕಕಲ್ಲುಬಾಳುಮಠದ ಶಿವಾನಂದ ಶಿವಾಚಾರ್ಯರು, ಬೆಳ್ಳಾವಿ ಮಹಾಂತ ಶಿವಾಚಾರ್ಯರು, ಬಿ.ಎಸ್. ಪರಮಶಿವಯ್ಯ, ಗುರುಸ್ವಾಮಿ, ಹೆಚ್.ಬಿ. ನಾಗರಾಜ್, ಪಂಚಾಕ್ಷರಿ ಹಿರೇಮಠ ಮತ್ತು ಸಂಗಯ್ಯ ಹಿರೇಮಠ ಅವರು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಶಿವಶಂಕರ ಶಾಸ್ತ್ರಿಗಳಿಂದ ಭಕ್ತಿಗೀತೆ, ಜಿ.ಜಿ. ರಕ್ಷಿತಾ ಅವರಿಂದ ಭರತನಾಟ್ಯ ಜರುಗಿತು. ಬೀರೂರು ಶಿವಸ್ವಾಮಿ ಸ್ವಾಗತಿಸಿದರು. ಸವಿತಾ ಶಿವಕುಮಾರ್ ನಿರೂಪಿಸಿದರು.

ಬೆಳಿಗ್ಗೆ ಚಿಕ್ಕಪೇಟೆ ಮಹಂತಿನಮಠದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಶುಭ ಹಾರೈಸಿದರು.



ಸಮಾರಂಭ ಉದ್ಘಾಟಿಸಿದ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಮಾತನಾಡಿ, ಭಾವೈಕ್ಯತೆ ಮತ್ತು ಆಧ್ಯಾತ್ಮ ಜ್ಞಾನ ಭಾರತದ ಉಸಿರು. ಮಾನವೀಯ ಮೌಲ್ಯಗಳನ್ನು ಉಳಿಸಿ ಬೆಳೆಸುವುದೇ ಧರ್ಮದ ನಿಜವಾದ ಧ್ಯೇಯವಾಗಿದೆ. ವೈಚಾರಿಕತೆ ಹೆಸರಿನಲ್ಲಿ ಸಂಸ್ಕೃತಿ-ಸಭ್ಯತೆ ನಾಶಗೊಳ್ಳಬಾರದು. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ವಿಚಾರ ಧಾರೆಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿದೀಪವಾಗಿವೆ ಎಂದರು.

## ನೇಮಕ

**■ವಿಜಯಸಾಕ್ಷಿ ಸುದ್ದಿ, ಗದಗ**



ಗದಗ ಜಿಲ್ಲಾ ಬಿಜೆಪಿ ಪಕ್ಷದ ಎಸ್ಸಿ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಮಲ್ಲು ಮಾದರ ನೇಮಕಗೊಂಡಿದ್ದಾರೆ ಎಂದು ಪಕ್ಷದ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾಜ ಒಡೆಯುವ ರಾಜಕಾರಣಿಗಳು ಅಪಾಯಕಾರಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

'ಹಿಂದೂಗಳ ತೆರಿಗೆ ಹಣ ಹಿಂದೂಗಳ ಅಭಿವೃದ್ಧಿಗೆ ಮಾತ್ರವೇ ಬಳಸಬೇಕು' ಎನ್ನುವ ಮೂಲಕ ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾರವರು ತಮ್ಮ ಸಂಕುಚಿತ ಮನೋಭಾವವನ್ನು ಪ್ರದರ್ಶಿಸಿದ್ದಾರೆ. ಅಜ್ಞಾನದಿಂದ ಭಾರತೀಯರನ್ನು ಒಡೆಯುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ರಾಜ್ಯಾಧ್ಯಕ್ಷ ಅಡ್ವೋಕೇಟ್ ತಾಹೇರ್ ಹುಸೇನ್ ಅಭಿಪ್ರಾಯಪಟ್ಟಿದ್ದಾರೆ.



ಹರೀಶ್ ಪೂಂಜಾರಿಗೆ ಪ್ರಜಾಪ್ರಭುತ್ವದ ಕುರಿತು ಪಾಠ ಮಾಡಿ ನಮ್ಮ ಸಂವಿಧಾನದ ಮಹತ್ವದ ಬಗ್ಗೆ ಅರ್ಥೈಸಬೇಕು. ಭಾರತದ ಬಹುತ್ವದ ಸಂಸ್ಕೃತಿಗಳ ಭಾವೈಕ್ಯತೆಯ ಬಗ್ಗೆ ಇರುವ ಅರಿವಿನ ಕೊರತೆಯೇ ಇಂತಹ ಹೇಳಿಕೆಗಳಿಗೆ ಕಾರಣ. ಕೋಮು ಅಮಲು ಮಾತ್ರ ತಲೆಯಲ್ಲಿ ತುಂಬಿ ಇತರರನ್ನು ತುಚ್ಛೀಕರಿಸಿ ಸಮಾಜ ಒಡೆಯುವ ರಾಜಕಾರಣಿಗಳು ದೇಶಕ್ಕೆ ಅಪಾಯಕಾರಿ. ಜನಪ್ರತಿನಿಧಿಗಳು ಪ್ರಜಾಪ್ರಭುತ್ವ ತತ್ವವನ್ನು ಅರ್ಥೈಸಿ ಸಾಮರಸ್ಯದ, ಸಹಬಾಳ್ವೆಯ ಭಾರತದ ನಿರ್ಮಾಣಕ್ಕೆ ಪ್ರಯತ್ನಿಸಲಿ ಎಂದು ಅವರು ಹೇಳಿದರು.

## ನಿಧನ ವಾರ್ತೆ

**ಪಾರ್ವತಮ್ಮ ಮಾದಾಪುರಮಠ**



ಲಕ್ಷ್ಮೇಶ್ವರ: ತಾಲೂಕಿನ ಬಾಲೆಹೊಸೂರ ಗ್ರಾಮದ ಹಿರಿಯರಾದ ಪಾರ್ವತಮ್ಮ ವಿರುಪಾಕ್ಷಯ್ಯ ಮಾದಾಪುರಮಠ (92) ಶನಿವಾರ ನಿಧನರಾದರು. ಮೃತರಿಗೆ ನಾಲ್ವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವಿದೆ.

# ಶಿಕ್ಷಣ ಮಕ್ಕಳ ಬದುಕಿನ ಬ್ರಹ್ಮಾಸ್ತ್ರ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳನ್ನು ಭಿಕ್ಷಾಟನೆಗೆ ತಳ್ಳುವುದು ಸಾಮಾಜಿಕ ಅಪರಾಧವಾಗಿದ್ದು, ಈ ನಿಟ್ಟಿನಲ್ಲಿ ಪಾಲಕರು ಸೇರಿದಂತೆ ಸಮಾಜದ ಜವಾಬ್ದಾರಿ ಬಹಳಷ್ಟಿದೆ ಎಂದು ಶಿರಹಟ್ಟಿ ಠಾಣೆಯ ಎಎಸ್ಐ ಬಿ.ಎನ್. ಯಳವತ್ತಿ ಹೇಳಿದರು.

ಅವರು ಶನಿವಾರ ತಾಲೂಕಿನ ಕುಂದ್ರಳ್ಳಿ ತಾಂಡಾದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿರಹಟ್ಟಿ ಪೊಲೀಸ್ ಠಾಣೆಯಿಂದ ಹಮ್ಮಿಕೊಂಡಿದ್ದ ಮಕ್ಕಳ ಭಿಕ್ಷಾಟನೆ, ಬಾಲ್ಯವಿವಾಹ ಸೇರಿ ಬಾಲಾಪರಾಧ ತಡೆ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸರ್ಕಾರ ಮಕ್ಕಳ ಉಚಿತ ಶಿಕ್ಷಣಕ್ಕಾಗಿ ಹತ್ತಾರು ಯೋಜನೆ, ಅನಕೂಲತೆಗಳನ್ನು ಕಲ್ಪಿಸಿದೆ. ಶಿಕ್ಷಣ ಮಕ್ಕಳ ಬದುಕನ್ನು ಸುಂದರವಾಗಿಸುವ ಬ್ರಹ್ಮಾಸ್ತ್ರವಾಗಿದ್ದು, ಅವರಿಗೆ ಬಾಲ್ಯದಲ್ಲಿಯೇ ಭಿಕ್ಷಾಟನೆ ಸೇರಿ ಬಾಲಾಪರಾಧಿ ಕೃತ್ಯಗಳಲ್ಲಿ ತೊಡಗಿಸಿಕೊಳ್ಳದಂತೆ ಎಚ್ಚರಿಕೆಯಿಂದ ನೋಡಿಕೊಳ್ಳುವ ಜವಾಬ್ದಾರಿ ಎಲ್ಲರದ್ದಾಗಿದೆ. ಇಂತಹ ಪ್ರಕರಣಗಳು ಕಂಡು ಬಂದಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಎಂದ ಅವರು, ಮಕ್ಕಳನ್ನು ಭಿಕ್ಷಾಟನೆಗೆ ಬಳಸಿಕೊಳ್ಳುತ್ತಿರುವ ಆಘಾತಕಾರಿ ಮಾರ್ಗಗಳ ಬಗ್ಗೆ ತಿಳಿಸಿ ಮಕ್ಕಳಲ್ಲಿ ಜಾಗೃತಿ ಮೂಡಿಸಿದರು.

ಈ ವೇಳೆ ಹವಾಲ್ದಾರ್ ಎಂ.ಎ. ಮುಲ್ಲಾನವರ ಬಾಲ್ಯವಿವಾಹದಿಂದ ಆಗುವ ತೊಂದರೆ ಹಾಗೂ ದುಷ್ಪರಿಣಾಮಗಳ ಬಗ್ಗೆ ತಿಳಿಸಿದರು. ಮುಖ್ಯ ಶಿಕ್ಷಕಿ ಆರ್.ಎಸ್. ಅರಮನಿ, ಶಿಕ್ಷಕರಾದ ಎಸ್.ವಿ. ಸೋಗಿ, ಎಮ್.ಬಿ. ಸರವಿ, ಕಾವ್ಯಾ ಬಾರಕೇರ ಇದ್ದರು.

## ಕಾಯಕ ಶರಣರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಶರಣರು ಸಮಸ್ತ ಸಮಾಜದ ಆಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಕಾಯಕ ಶರಣರು ಆಧ್ಯಾತ್ಮದ ಜೊತೆಗೆ ಪ್ರಜಾಪ್ರಭುತ್ವದ ಮಾದರಿಯನ್ನು ತೋರಿಸಿಕೊಟ್ಟು, ಸಮಾಜದಲ್ಲಿ ಯಾವುದೇ ಕಾಯಕ ಸಣ್ಣದಲ್ಲ ಎಂಬ ಸಂದೇಶ ಸಾರಿದ ಶರಣರ ತತ್ವಗಳು ಎಲ್ಲರಿಗೂ ಆದರ್ಶಪ್ರಾಯವಾಗಿವೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಕಾಯಕ ಶರಣರಾದ ಶರಣ ಮಾದಾರ ಚೆನ್ನಯ್ಯ, ಶರಣ ಸಮಗಾರ ಹರಳಯ್ಯ, ಶರಣ ಡೋಹರ ಕಕ್ಕಯ್ಯನವರ ಜಯಂತಿಯ ಅಂಗವಾಗಿ ಶರಣರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಗೌರವ ಸಮರ್ಪಿಸಿ ಅವರು ಮಾತನಾಡಿದರು.

ಶರಣರ ವಚನಗಳು ಸಂವಿಧಾನ ರಚನೆಯಲ್ಲಿ ಅಗಾಧವಾದ ಪರಿಣಾಮ ಬೀರಿವೆ. ಶರಣ ಮಾದಾರ ಚೆನ್ನಯ್ಯ, ಶರಣ ಸಮಗಾರ ಹರಳಯ್ಯ, ಶರಣ ಡೋಹರ ಕಕ್ಕಯ್ಯ ಅವರುಗಳು ಬಡತನದಲ್ಲಿ ಮಾಡುವ ಕಾಯಕಗಳು ಹಿರಿಮೆ ಇವೆ ಎಂದು ಸ್ವಾಭಿಮಾನದಿಂದ ಬದುಕಿದ ಮಹಾನುಭಾವರಾಗಿದ್ದಾರೆ ಎಂದರು.

ಶರಣರ ಜಯಂತಿಗಳು ಕೇವಲ ಅದೇ ಸಮುದಾಯಕ್ಕೆ ಸೀಮಿತವಾಗಿರುವದು ದುರ್ದೈವದ ಸಂಗತಿಯಾಗಿದೆ. ಮುಂದಿನ ಜಯಂತಿಗಳಲ್ಲಿ ಸಮುದಾಯದ ಜನ ಸೇರಿದಂತೆ ಎಲ್ಲರೂ ಪಾಲ್ಗೊಳ್ಳುವ ಮೂಲಕ ಶರಣ ಜಯಂತಿಗಳನ್ನು ಆಚರಿಸಬೇಕು. ವಿಶ್ವಗುರು ಕರ್ನಾಟಕದ ಸಾಂಸ್ಕೃತಿಕ ರಾಯಭಾರಿ ಅಣ್ಣ ಬಸವಣ್ಣ ಸೇರಿದಂತೆ ಎಲ್ಲ ಶರಣರು ತಮ್ಮ ವಚನ, ಕಾಯಕಗಳ ಮೂಲಕ ಸಮಾಜದಲ್ಲಿನ ಅಂಕು-ಡೊಂಕುಗಳನ್ನು ತಿದ್ದುವ ಕಾರ್ಯಮಾಡಿದ್ದಾರೆ. ಇವರುಗಳು ಒಂದು ಜಾತಿಗೆ ಸೀಮಿತವಾಗಿರದೇ ಇಡೀ ಸಮಾಜದ ಆಸ್ತಿಯಾಗಿದ್ದರು. ಇವರ ಜಯಂತಿಯನ್ನು ಎಲ್ಲ ಸಮುದಾಯದವರು ಕೂಡಿ ಆಚರಿಸಬೇಕಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

> ಸಮಾಜ ತಿದ್ದುವ ಕಾರ್ಯ ಮಾಡಿದ ಶರಣರ ವಚನಗಳನ್ನು ಇಂದು ಹೆಕ್ಕಿ ತೆಗೆಯಬೇಕಾಗಿದೆ. ವಚನಗಳಲ್ಲಿನ ಸಾಮಾಜಿಕ ಕಳಕಳಿಯನ್ನು ಅರಿತುಕೊಂಡು ಸಮಾಜ ಸುಧಾರಣೆಗೆ ಪ್ರತಿಯೊಬ್ಬರೂ ಮುಂದಾಗಬೇಕು. ಶರಣರ ವಚನಗಳ ಹೆಚ್ಚಿನ ಪ್ರಚಾರವಾಗಬೇಕಾಗಿದ್ದು, ಇದಕ್ಕೆ ಬೇಕಾದ ಎಲ್ಲ ರೀತಿಯ ಸಹಕಾರ ನೀಡಲಾಗುವದು ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಮೂವರು ಶರಣರು ಬಸವಣ್ಣನವರ ತತ್ವ-ಸಿದ್ಧಾಂತಗಳನ್ನು ಮೆಚ್ಚಿ ಅವರ ಅನುಯಾಯಿಗಳಾದವರು. ಬಸವಣ್ಣನವರು ಸಮಾಜದಲ್ಲಿನ ಮೇಲು-ಕೀಳು ಭಾವನೆಗಳನ್ನು ತೆಗೆದುಹಾಕಿ ಜ್ಯಾತ್ಯಾತೀತ ಸಮಾಜ ಕಟ್ಟಿದರು. ಮಾದಾರ ಚನ್ನಯ್ಯನವರ ಪ್ರತಿ ವಚನದಲ್ಲಿ ಜಾತಿ ಪದ್ಧತಿ ಹೋಗಲಾಡಿಸಲು ಬಸವಣ್ಣನವರ ಜೊತೆ ಹೋರಾಡಿದರು. ಕಾಯಕ ಶರಣರು ತಮ್ಮ ಕಾಯಕದಿಂದ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳುವ ಮೂಲಕ ಸಮಾಜ ಸುಧಾರಣೆಗೆ ತಮ್ಮನ್ನು ತೊಡಗಿಸಿಕೊಂಡಿದ್ದು, ಅವರ ಜೀವನ ಹಾಗೂ ವಚನಗಳಂತೆ ಪ್ರತಿಯೊಬ್ಬರೂ ದುಡಿದು ಊಟ ಮಾಡುವದನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ತಿಳಿಸಿದರು.

ಸಮಾಜದಲ್ಲಿನ ಜಾತಿ ಪದ್ಧತಿಯನ್ನು ನಿರ್ಮೂಲನೆ ಮಾಡಲು ಅನೇಕ ಮಹನೀಯರು ನಾನಾ ರೀತಿಯ ಹೋರಾಟಗಳನ್ನು ಮಾಡಿರುತ್ತಾರೆ. ಸಮಾಜದಲ್ಲಿನ ಜಾತಿ ಪದ್ಧತಿ ನಿರ್ಮೂಲನೆ ಮಾಡುವ ಶಕ್ತಿ ಶಿಕ್ಷಣದಲ್ಲಿದ್ದು, ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಸಮಾಜ ಸುಧಾರಣೆಗೆ ತಮ್ಮದೇ ಆದ ಕೊಡುಗೆ ನೀಡುವಂತೆ ಕರೆ ನೀಡಿದರು.

ಹುಲಕೋಟಿ ಜಿ.ಸಿ.ಟಿ.ಎಂ. ಪದವಿಪೂರ್ವ ಕಾಲೇಜಿನ ಹಿರಿಯ ಶ್ರೇಣಿಯ ಕನ್ನಡ ಉಪನ್ಯಾಸಕ ಡಾ. ಅರ್ಜುನ ಗೊಳಸಂಗಿ ಕಾಯಕ ಶರಣರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಂ.ಬಿ. ಸಂಕದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹಿರೇಮಠ ಸೇರಿದಂತೆ ಸಮಾಜದ ಗಣ್ಯರು, ಸಾರ್ವಜನಿಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪಂ.ವೆಂಕಟೇಶ ಅಲಕೋಡ್ ಹಾಗೂ ಸಂಗಡಿಗರು ನಾಡಗೀತೆ ಪ್ರಚುರಪಡಿಸಿದರು. ಬಾಬಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

# ಶ್ರೀ ಶಿವಶಾಂತವೀರ ಶರಣರ ಸದ್ಭಾವನಾ ಪಾದಯಾತ್ರೆ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಶ್ರೀ ಚನ್ನವೀರ ಶರಣರ 29ನೇ ಪುಣ್ಯಸ್ಮರಣೋತ್ಸವ ಜಾತ್ರಾ ಮಹೋತ್ಸವ ಅಂಗವಾಗಿ ಕದಡಿ ಗ್ರಾಮದಿಂದ ಬಳಗಾನೂರವರೆಗೆ ಶ್ರೀ ಶಿವಶಾಂತವೀರ ಶರಣರಿಂದ ಕಾಯಕದೇವೋಭವ ಹಾಗೂ ಪರಿಸರ ಜಾಗೃತಿಯ ಸದ್ಭಾವನಾ ಪಾದಯಾತ್ರೆಯು ಜರುಗಿತು.

ಶ್ರೀ ಶಿವಶಾಂತವೀರ ಶರಣರು ಆಶೀರ್ವಚನ ನೀಡಿ, ಮನುಷ್ಯ ಕಾಯಕ ಜೀವಿಯಾಗಬೇಕು. ಕಾಯಕದಲ್ಲಿ ನಿಷ್ಠೆ ಹೊಂದಿರಬೇಕು. ಆಗ ಮನಸ್ಸು, ಆರೋಗ್ಯ ಸದೃಢವಾಗುತ್ತದೆ. ನಿರಂತರ ಉತ್ಸಾಹಿಯಾಗಿ ಕಾರ್ಯನಿರ್ವಹಿಸುವ ಪ್ರವೃತ್ತಿ ಬೆಳೆಸಿಕೊಳ್ಳಬೇಕು.

ಮಕ್ಕಳಲ್ಲಿಯ ಉತ್ಸಾಹವನ್ನು ಪ್ರೋತ್ಸಾಹಿಸಿ ಅವರಲ್ಲಿ ಗುರು-ಹಿರಿಯರನ್ನು ಗೌರವಿಸುವ ಹಾಗೂ ಪರಿಸರ ಪ್ರಜ್ಞೆಯ ಬಗ್ಗೆ ಜಾಗೃತಿ ಮೂಡಿಸಿ, ಕಾಯಕ ಪ್ರವೃತ್ತಿ ಅಳವಡಿಸಿಕೊಳ್ಳುವಲ್ಲಿ ಪ್ರೇರೆಪಿಸಬೇಕು. ನಮ್ಮ ಪರಿಸರ ಸಂರಕ್ಷಣೆ ನಮಗೆ ಸಮೃದ್ಧಿ, ಸಂತೃಪ್ತಿ ತಂದುಕೊಡುತ್ತದೆ. ಪ್ರಕೃತಿ ನಿರ್ಲಕ್ಷ್ಯ ಮಾಡಿದರೆ, ವಿಕೋಪ ಪರಿಸ್ಥಿತಿ ಉಂಟಾಗಿ ಜೀವನ ನಿರ್ವಹಣೆಯಲ್ಲಿ ವ್ಯತ್ಯಾಸಗಳಾಗುತ್ತವೆ ಎಂದರು.

ಕದಡಿ ನೀಲಮ್ಮನ ಮಠದ ಶ್ರೀ ಮಹಾದೇವ ತಾತನವರು ಸಮ್ಮುಖ ವಹಿಸಿದ್ದರು. ಪಂ. ಪುಟ್ಟರಾಜ ಶಾಸ್ತ್ರಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿವಲಿಂಗಯ್ಯ ಶಾಸ್ತ್ರಿಗಳು ಸಿದ್ದಾಪೂರ ಸಂಚಾಲಕತ್ವ ವಹಿಸಿದ್ದರು. ಹೊಂಬಳದ ಭಜನಾ ಸಂಘ ಹಾಗೂ ಕಂಪ್ಲಿಯ ಕೆ. ರಾಮಪ್ಪ ಹಾಗೂ ಸಂಗಡಿಗರ ವಾದ್ಯ ವೃಂದದವರು, ಶ್ರೀ ಶರಣರ ವಿದ್ಯಾಪೀಠದ ವಿದ್ಯಾರ್ಥಿಗಳು, ಸಿಬ್ಬಂದಿ, ಕದಡಿ ಹಾಗೂ ಬಳಗಾನೂರ ಗ್ರಾಮಸ್ಥರು ಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

# ಬಿಂಕದಕಟ್ಟಿಯಲ್ಲಿ ಸಂವಿಧಾನ ಜಾಗೃತಿ ಜಾಥಾ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಬಿಂಕದಕಟ್ಟಿ ಗ್ರಾಮ ಪಂಚಾಯತನಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಜರುಗಿತು.

ಸಂವಿದಾನ ಜಾಗೃತಿ ಜಾಥಾ ರಥವನ್ನು ಸ್ವಾಗತಿಸಿ, ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸರ್ವ ಸದಸ್ಯರು, ಸಮುದಾಯದ ಮುಖಂಡರು, ಸಾರ್ವಜನಿಕರು ಹಾಗೂ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಸೇರಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚಾರ ಮಾಡಿ, ಜಾಗೃತಿ ಮೂಡಿಸಿದರು.

## ಗದಗ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿಯಿಲ್ಲ: ಬಿಜೆಪಿ

# ಜಿಲ್ಲೆಯ ಉಸ್ತುವಾರಿ ಸಚಿವರೇ, ಉತ್ತರ ಕೊಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಘಟಕದ ವತಿಯಿಂದ ರಾಜ್ಯದ ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲರಿಗೆ 'ಕ್ಷೇತ್ರದ ಶಾಸಕರೇ, ನಿಮ್ಮ ಅಧಿಕೃತ ಕಚೇರಿ ವಿಳಾಸ ಕೊಡಿ' ಎಂದು ಪತ್ರ ನೀಡಲಾಯಿತು.

ಕಾನೂನು ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲರೇ, ನಿಮ್ಮ ಸರ್ಕಾರ ರಚನೆಯಾಗಿ ಹಲವು ತಿಂಗಳು ಕಳೆದರೂ ರಾಜ್ಯದ ಜನತೆ ಬರಗಾಲದ ಛಾಯೆಯಲ್ಲಿ ಬೆಂದು ಹೋಗುತ್ತಿದ್ದರೂ ಇಲ್ಲಿಯವರೆಗೆ ಬರ ಪರಿಹಾರ ಘೋಷಣೆಯಾಗಿಲ್ಲ, ರೈತರಿಗೆ ನೀಡುತ್ತಿದ್ದ ಹಾಲಿನ ಪ್ರೋತ್ಸಾಹ ಧನ ಕೂಡ ಕಡಿತಗೊಳಿಸಿದ್ದೀರಿ. ಕುಡಿಯುವ ನೀರಿನ ಸಮಸ್ಯೆ ಮುಂದುವರೆದಿದ್ದು, ಗದಗ ನಗರದಲ್ಲಿ 30 ವರ್ಷಗಳಿಂದ ಕುಡಿಯುವ ನೀರಿನ ಅಭಾವವಿದ್ದರೂ ಸಹಿತ ಇಲ್ಲಿಯವರೆಗೆ ಸುಳ್ಳು ಭರವಸೆ ನೀಡುತ್ತಾ ಬಂದಿದ್ದೀರಿ. ಹಾಗೂ 25-30 ವರ್ಷಗಳಿಂದ ನಿಜವಾದ ವಸತಿ ರಹಿತ ಬಡವರು ಹಾಗೆಯೇ ಉಳಿದಿದ್ದಾರೆ.

ತಾವು ಅಧಿಕಾರಕ್ಕೆ ಬಂದು ಹಲವಾರು ತಿಂಗಳುಗಳು ಕಳೆದರೂ ರಾಜ್ಯದಲ್ಲಿ ಮತ್ತು ಜಿಲ್ಲೆಯಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳಾಗಿಲ್ಲ. ಹಲವಾರು ಭರವಸೆಗಳು, ನಿರೀಕ್ಷೆಗಳನ್ನು ಇಟ್ಟುಕೊಂಡು ತಮ್ಮನ್ನು ವಿಧಾನಸಭೆಗೆ ಕಳುಹಿಸಿಕೊಟ್ಟಿದ್ದಾರೆ. ಆದರೆ ಅಧಿಕಾರಕ್ಕೆ ಬಂದ ಮೇಲೆ ಗದಗ ಜಿಲ್ಲೆಯ ಕೇಂದ್ರ ಸ್ಥಳವಾದ ಗದಗ ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕಾಮಗಾರಿಗಳು ನಡೆದಿಲ್ಲ ಎಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಗದಗ-ಬೆಟಗೇರಿ ನಗರಸಭಾಧ್ಯಕ್ಷೆ ಉಷಾ ಮಹೇಶ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ನಗರಸಭಾ ಹಿರಿಯ ಸದಸ್ಯರಾದ ವಿನಾಯಕ ಮಾನ್ವಿ, ಅನಿಲ ಅಬ್ಬಿಗೇರಿ, ಹಿರಿಯ ಮುಖಂಡರಾದ ಎಮ್.ಎಸ್. ಕರಿಗೌಡ್ರ, ಅಶೋಕ ಸಂಕಣ್ಣವರ, ಎಮ್.ಎಮ್. ಹಿರೇಮಠ, ರಾಜು ಕಾಟಿಗರ ಸೇರಿದಂತೆ ಪಕ್ಷದ ಹಿರಿಯ ಮುಖಂಡರು, ನಗರಸಭಾ ಸದಸ್ಯರು ಪಾಲ್ಗೊಂಡಿದ್ದರು.

## ಗಮನ ಸೆಳೆದ ಶಾಲಾ ಮಕ್ಕಳ ಸಂವಿಧಾನ ಜಾಗೃತಿ ನೃತ್ಯ

# ಸಂವಿಧಾನವನ್ನು ಎಲ್ಲರೂ ಓದಿ ತಿಳಿಯಿರಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಭಾರತದ ಸಂವಿಧಾನ ಅಂಗೀಕಾರವಾಗಿ 75 ವರ್ಷ ತುಂಬಿದ ಸಂಭ್ರಮದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಮ್ಮಿಕೊಂಡ ಸಂವಿಧಾನ ಜಾಗೃತಿ ರಥವನ್ನು ಗ್ರಾಮ ಪಂಚಾಯತ ನೇತೃತ್ವದಲ್ಲಿ ಗ್ರಾಮಸ್ಥರು ಅದ್ದೂರಿಯಾಗಿ ಬರಮಾಡಿಕೊಂಡರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ಅವರ ಮೂರ್ತಿಯನ್ನು ಪ್ರತಿಷ್ಠಾಪಿಸಿರುವ ರಥಕ್ಕೆ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ನಮನ ಸಲ್ಲಿಸಿ ಸ್ವಾಗತಿಸಿದರು. ಬಿ.ಆರ್. ಅಂಬೇಡ್ಕರ ನಗರದಿಂದ ಆರಂಭವಾದ ರಥದ ಮೆರವಣಿಗೆಯು ಅತ್ತಿಮಬ್ಬೆ ಮಹಾದ್ವಾರದ ಮೂಲಕ ಗ್ರಾ.ಪಂ ಆವರಣ ತಲುಪಿತು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಅಂಬೇಡ್ಕರ ಅವರು ತಮ್ಮ ಮನೆಯ ವೈಯಕ್ತಿಕ ಸಮಸ್ಯೆಯಿದ್ದರೂ ಸಹ ಭಾರತಾಂಬೆಯ ಮಕ್ಕಳಿಗೆ ಉತ್ತಮ ಸಂವಿಧಾನವನ್ನು ನೀಡಬೇಕು ಎಂಬ ಸಂಕಲ್ಪ ತೊಟ್ಟು ಸಂವಿಧಾನವನ್ನು ರಚಿಸಿದ್ದಾರೆ. ಈ ಸಂವಿಧಾನದಿಂದ ಇಂದು ಬಡವ, ಬಲ್ಲಿದ, ಕೆಳವರ್ಗ-ಮೇಲ್ವರ್ಗ ಎಂಬ ತಾರತಮ್ಯವನ್ನು ಹೋಗಲಾಡಿಸಿ ಎಲ್ಲರನ್ನೂ ಸಮಾನವಾಗಿ ಕಾಣುವ ಭಾಗ್ಯ ಬಂದಿದೆ. ಪ್ರತಿಯೊಬ್ಬರಿಗೂ ಸಂವಿಧಾನದ ಮಹತ್ವ ಅರಿತುಕೊಳ್ಳಲು ಸರಕಾರ ಜಾಗೃತಿ ಮೂಡಿಸುತ್ತಿರುವುದು ಸ್ವಾಗತಾರ್ಹ ಎಂದರು.

> ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಮಾತನಾಡಿ, 60 ದೇಶಗಳ ಸಂವಿಧಾನವನ್ನು ಓದಿ ಅತ್ಯಂತ ಉತ್ಕೃಷ್ಟವಾದ ಸಂವಿಧಾನವನ್ನು ಈ ದೇಶಕ್ಕೆ ಅಂಬೇಡ್ಕರರು ಕೊಟ್ಟಿದ್ದಾರೆ. ಇದರಿಂದ ನಾವೆಲ್ಲರೂ ಸಮಾನವಾಗಿ ಬದುಕುತ್ತಿದ್ದೇವೆ. ಅಂತಹ ಸಂವಿಧಾನವನ್ನು ಎಲ್ಲರೂ ಓದಿ ತಿಳಿದುಕೊಳ್ಳಬೇಕು ಮತ್ತು ಸಂವಿಧಾನದ ಪುಸ್ತಕವನ್ನು ನಾವೆಲ್ಲರೂ ದಿನನಿತ್ಯ ಪೂಜೆ ಮಾಡಬೇಕು ಎಂದು ವಿನಂತಿಸಿಕೊಂಡರು.

ಬಾಲಕಿಯರ ಪ್ರೌಢಶಾಲೆಯ ಶಿಕ್ಷಕಿ ಎಂ.ಬಿ. ಗೂಡಗೂರು ಉಪನ್ಯಾಸ ನೀಡಿದರು. ಬಿ.ಇ.ಒ ವಿ.ವಿ. ನಡುವಿನಮನಿ ಸಂವಿಧಾನ ಪೀಠಿಕೆಯ ಪ್ರತಿಜ್ಞಾ ವಿಧಿ ಬೋಧಿಸಿದರು. ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆ, ಸ್ವಾಮಿ ವಿವೇಕಾನಂದ ಪ್ರಾಥಮಿಕ ಶಾಲೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು.


ಗ್ರಾ.ಪಂ. ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮೀ ಇಂಗಳಹಳ್ಳಿ, ಕಚೇರಿಯ ಅಧೀಕ್ಷಕಿ ಎನ್. ಮಂಜುಳಾ, ಪಿ.ಡಿ.ಒ ರಾಜಕುಮಾರ ಭಜಂತ್ರಿ, ಜಿಲ್ಲಾ ಎಸ್.ಸಿ-ಎಸ್.ಟಿ ದೌರ್ಜನ್ಯ ಸಮಿತಿಯ ಸದಸ್ಯ ಬಸವರಾಜ ಮುಳ್ಳಾಳ, ದಲಿತ ಬಹುಜನ ಚಳುವಳಿಯ ಅಧ್ಯಕ್ಷರಾದ ನಾಗಮ್ಮ ಹಾಲಿನವರ, ಎಸ್.ಡಿ.ಎಂ.ಸಿ ಅಧ್ಯಕ್ಷ ಮರಿಯಪ್ಪ ವಡ್ಡರ, ಗ್ರಾ.ಪಂ ಸದಸ್ಯರು ಉಪಸ್ಥಿತರಿದ್ದರು.

ನೀಲಗುಂದದ ಸೃಷ್ಟಿ ಜಾನಪದ ಕಲಾ ತಂಡದವರು ಕ್ರಾಂತಿಗೀತೆ ಹಾಡಿದರು. ಕಾರ್ಯದರ್ಶಿ ತುಕಾರಾಮ ಹುಲಗಣ್ಣವರ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು ನಿರೂಪಿಸಿದರು. ಬಿ.ವಿ. ಗುಡಿ ವಂದಿಸಿದರು.

# ಸಂವಿಧಾನ ಜಾಗೃತಿ ಜಾಥಾ ಯಶಸ್ವಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂವಿಧಾನ ಅಂಗೀಕಾರಗೊಂಡು 74 ಸಂವತ್ಸರಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ 'ಸಂವಿಧಾನ ಜಾಗೃತಿ ಜಾಥಾ' ಹಮ್ಮಿಕೊಳ್ಳಲಾಗಿದೆ. ಜಾಥಾಕ್ಕೆ ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರು ಚಾಲನೆ ನೀಡಿದ್ದು, ಫೆ. 23ರವರೆಗೆ ಈ ಜಾಥಾ ಜಿಲ್ಲೆಯ 9 ಸ್ಥಳೀಯ ಸಂಸ್ಥೆಗಳು ಮತ್ತು ಎಲ್ಲ 122 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸಂಚರಿಸಲಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯ ನಿರ್ದೇಶಕ ಎಸ್.ಬಿ. ಕುಲಕರ್ಣಿ ತಿಳಿಸಿದ್ದಾರೆ.



ಫೆ. 13ರಂದು ಲಕ್ಷ್ಮೇಶ್ವರ ತಾಲೂಕಿನ ಯಳವತ್ತಿ, ಮಾಡಳ್ಳಿ, ಮಾಗಡಿ, ಗೊಜನೂರಿಗೆ ಜಾಥಾ ಆಗಮಿಸಲಿದೆ. ಫೆ.14ರಂದು ಪಟ್ಟಣದ ಉಮಾ ವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ಬೆಳಿಗ್ಗೆ 9ಕ್ಕೆ ಜಾಥಾವನ್ನು ವಿಶೇಷವಾಗಿ ಸ್ವಾಗತಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಸಕರು, ತಹಸೀಲ್ದಾರರು, ಜನಪ್ರತಿನಿಧಿಗಳು, ಅಧಿಕಾರಿಗಳನ್ನೊಳಗೊಂಡ ಜಾಗೃತಿ ಕಾರ್ಯಕ್ರಮ ನೆರವೇರಲಿದೆ. ಬಳಿಕ ತಾಲೂಕಿನ ರಾಮಗೇರಿ, ಗೋವನಾಳ, ಶಿಗ್ಲಿ, ದೊಡ್ಡೂರ ಗ್ರಾಮದಲ್ಲಿ ಸಂಚರಿಸಲಿದೆ.

ಫೆ. 15ರಂದು ಅಡರಕಟ್ಟಿ, ಬಟ್ಟೂರ, ಪು.ಬಡ್ನಿ, ಆದರಳ್ಳಿ ಹಾಗೂ ಹುಲ್ಲೂರು ಗ್ರಾಮದಲ್ಲಿ, ಫೆ.16ರಂದು ಸೂರಣಗಿ, ಬಾಲೆಹೊಸೂರ ಗ್ರಾಮದಲ್ಲಿ ಸಂಚರಿಸಲಿದೆ. ತಾಲೂಕಾ ಕೇಂದ್ರ ಹಾಗೂ ತಾಲೂಕಿನ ಎಲ್ಲಾ ಗ್ರಾ.ಪಂಗಳ ಕೇಂದ್ರ ಸ್ಥಾನದಲ್ಲಿ ಕಾರ್ಯಕ್ರಮ ಆಯೋಜಿಸಿ ಸಾರ್ವಜನಿಕರಿಗೆ ಸಂವಿಧಾನದ ಮಹತ್ವವನ್ನು ತಿಳಿಸಲಾಗುವುದು. ಈ ಬಗ್ಗೆ ಈಗಾಗಲೇ ತಹಸೀಲ್ದಾರ ಕಚೇರಿ, ಸ್ಥಳೀಯ ಸಂಸ್ಥೆ ಮತ್ತು ಗ್ರಾ.ಪಂಗಳಲ್ಲಿ ಪೂರ್ವಭಾವಿಸಭೆ ಮಾಡಿ ತಿಳಿಸಲಾಗಿದೆ. ಶಾಲಾ-ಕಾಲೇಜುಗಳಲ್ಲಿ ಸೈಕಲ್ ಜಾಥಾದ ಮೂಲಕ ಜಾಗೃತಿ ಮೂಡಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ಜನಪ್ರತಿನಿಧಿಗಳು, ಸಮುದಾಯ/ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು, ಅಧಿಕಾರಿಗಳು, ಶಾಲಾ-ಕಾಲೇಜುಗಳ ಶಿಕ್ಷಕರು, ವಿದ್ಯಾರ್ಥಿಗಳು, ಮಾಧ್ಯಮದವರು, ಅಂಗನವಾಡಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅವರು ವಿನಂತಿಸಿದ್ದಾರೆ.




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ದಾಸಶ್ರೇಷ್ಠ ಶ್ರೀ ಪುರಂದರ ದಾಸರ ಪುಣ್ಯತಿಥಿ ಹಾಗೂ ಶ್ರೀ ವೀರನಾರಾಯಣ ಯುವಕ ಮಂಡಳ ಮತ್ತು ಮಹಾಲಕ್ಷ್ಮೀ ಯುವತಿ ಮಂಡಳದ ವಾರ್ಷಿಕೋತ್ಸವ ಕಾರ್ಯಕ್ರಮ ವಿಜೃಂಭಣೆಯಿಂದ ಜರುಗಿತು. ಬೆಳಿಗ್ಗೆ ಪುರಂದರ ದಾಸರ ಭಾವಚಿತ್ರದ ಪೂಜೆ, ಸಾಯಂಕಾಲ ಶೃತಿ ಕೆರೂರ ಹಾಗೂ ಸಂಗಡಿಗರಿಂದ ದಾಸವಾಣಿ ಕಾರ್ಯಕ್ರಮ ನೆರವೇರಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka